# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 26 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 08–08–2024 ಗುರುವಾರ | ಪುಟ: 4 | ಬೆಲೆ : ರೂ.2–00

Volume - 02 Issue - 26 | Title- Code: KARKAN 28269 | Chitradurga | Date: 08-08-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

26ರಂದು ಕೃಷ್ಣ ಜಯಂತಿ: ಅದ್ದೂರಿ ಆಚರಣೆಗೆ ನಿರ್ಧಾರ 2

ಉದ್ಯೋಗ ಖಾತರಿಯೋಜನೆಯ ನರೇಗಾ ಕಾಮಗಾರಿಗಳಿಗೆ ಯಂತ್ರಗಳ ಬಳಕೆ ಸಲ್ಲದು 3

ಪ್ರಶ್ನೆ ಪತ್ರಿಕೆ ಗೊಂದಲ: ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಎಬಿವಿಪಿ ಒತ್ತಾಯ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ದಾವಣಗೆರೆ–ಚಿತ್ರದುರ್ಗ–ತುಮಕೂರು ರೈಲ್ವೆ ಮಾರ್ಗಕ್ಕೆ 150 ಕೋಟಿ ಅನುದಾನ

## ಸಂಸದ ಗೋವಿಂದ ಕಾರಜೋಳರವರ ಪ್ರಶ್ನೆಗೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ

» **ಚಿತ್ರದುರ್ಗ**

ಕರ್ನಾಟಕ ರಾಜ್ಯದಲ್ಲಿ ಪ್ರಗತಿಯಲ್ಲಿರುವ ರೈಲ್ವೆ ಯೋಜನೆಗಳ ವಿವರ ಹಾಗೂ ದಾವಣಗೆರೆ–ತುಮಕೂರು ವಯಾ ಚಿತ್ರದುರ್ಗ ನೇರ ರೈಲುಮಾರ್ಗದ ಯೋಜನೆಯ ಪ್ರಗತಿ ವಿವರ ಕುರಿತು ಸಂಸದ ಗೋವಿಂದ ಕಾರಜೋಳ ಸಂಸತ್ತಿನಲ್ಲಿ ಮಾಹಿತಿ ಕೇಳಿದರು.

ಸಂಸದರ ಪ್ರಶ್ನೆಗೆ ಉತ್ತರ ನೀಡಿರುವ ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ್‌ರವರು ರೈಲ್ವೆ ಯೋಜನೆಗಳನ್ನು ವಲಯವಾರು ಮಂಜೂರು ಮಾಡಲಾಗುತ್ತದೆ. 01.04.2024 ರ ಮಾಹಿತಿಯಂತೆ ಕರ್ನಾಟಕ ರಾಜ್ಯದಲ್ಲಿ ಅಂದಾಜು 47,016 ಕೋಟಿ ವೆಚ್ಚದ 21 ಹೊಸ ಮಾರ್ಗಗಳು ಹಾಗೂ 10 ಡಬ್ಲಿಂಗ್ ಕಾಮಗಾರಿಗಳು ಸೇರಿ ಒಟ್ಟು 3,840 ಕಿ.ಮೀ ಉದ್ದದ 31 ಮೂಲಸೌಲಭ್ಯ ಯೋಜನೆಗಳು ವಿವಿಧ ಹಂತದ ಪ್ಲಾನಿಂಗ್/ಅನುಮೋದನೆ/ಪ್ರಗತಿ ಹಂತದಲ್ಲಿವೆ ಎಂದು ತಿಳಿಸಿದ್ದಾರೆ. ಇದರಲ್ಲಿ 1,302 ಕಿ.ಮೀ ಉದ್ದದ ಮಾರ್ಗದ ಕೆಲಸ ಪೂರ್ಣಗೊಳಿಸಿ ಕಾರ್ಯಾರಂಭ ಮಾಡಲಾಗಿದೆ ಮತ್ತು ಮಾರ್ಚ್ 2024 ರವರೆಗೆ ರೂ.17,382 ಕೋಟಿ ಅನುದಾನವನ್ನು ವೆಚ್ಚ ಮಾಡಲಾಗಿದೆ.




ತುಮಕೂರು–ಚಿತ್ರದುರ್ಗ–ದಾವಣಗೆರೆ ನಡುವೆ 191 ಕಿ.ಮೀ ಉದ್ದದ ನೇರ ರೈಲು ಮಾರ್ಗವನ್ನು ಕರ್ನಾಟಕ ರಾಜ್ಯ ಸರ್ಕಾರದೊಂದಿಗೆ ವೆಚ್ಚ ಹಂಚಿಕೆ ಆಧಾರದ ಮೇಲೆ ಕೈಗೆತ್ತಿಕೊಳ್ಳಲಾಗಿದೆ. ಇದರಲ್ಲಿ ಕರ್ನಾಟಕ ರಾಜ್ಯ ಸರ್ಕಾರವು ಉಚಿತವಾಗಿ ಅವಶ್ಯವಾಗಿರುವ ಭೂಮಿ ಹಾಗೂ ಶೇಕಡ 50 ರಷ್ಟು ನಿರ್ಮಾಣ ವೆಚ್ಚವನ್ನು ಹಂಚಿಕೊಳ್ಳುತ್ತಿದೆ. ಒಟ್ಟಾರೆ ಯೋಜನೆಯ ವೆಚ್ಚ ರೂ.2,142.35 ಕೋಟಿಯಾಗಲಿದ್ದು, ಮಾರ್ಚ್ 2024 ರವರೆಗೆ ರೂ.359.32 ಕೋಟಿಯಷ್ಟು ವೆಚ್ಚವನ್ನು ಈ ಯೋಜನೆಗಾಗಿ ಮಾಡಲಾಗಿದೆ. 2024–25 ರ ರೈಲ್ವೆ ಬಜೆಟ್‌ನಲ್ಲಿ 150 ಕೋಟಿ ಅನುದಾನವನ್ನು ಈ ಯೋಜನೆಗಾಗಿ ಒದಗಿಸಲಾಗಿದೆ ಎಂದಿದ್ದಾರೆ.



21 ಹೊಸ ಮಾರ್ಗಗಳ ಪೈಕಿ 33,125 ಕೋಟಿ ವೆಚ್ಚದ 2,556 ಕಿ.ಮೀ. ಉದ್ದದ ಮಾರ್ಗಗಳಲ್ಲಿ ಈಗಾಗಲೇ ಮಾರ್ಚ್ 2024 ರ ಅಂತ್ಯದ ವೇಳೆಗೆ ರೂ.7,592 ಕೋಟಿ ವೆಚ್ಚ ಮಾಡಿ 395 ಕಿ.ಮೀ ಉದ್ದದ ಮಾರ್ಗವನ್ನು ಪೂರ್ಣಗೊಳಿಸಲಾಗಿದೆ. ರೂ. 13,891 ಕೋಟಿ ವೆಚ್ಚದ 1,284 ಕಿ.ಮೀ. ಉದ್ದದ 10 ಡಬ್ಲಿಂಗ್ ಯೋಜನೆಗಳ ಪೈಕಿ ಈಗಾಗಲೇ ರೂ.9791 ಕೋಟಿ ವೆಚ್ಚ ಮಾಡಿ 907 ಕಿ.ಮೀ ಡಬ್ಲಿಂಗ್ ಕಾಮಗಾರಿ ಮುಗಿಸಲಾಗಿದೆ.

2014 ರಿಂದ ಕರ್ನಾಟಕ ರಾಜ್ಯದಲ್ಲಿ ರೈಲ್ವೆ ಯೋಜನೆಗಳಿಗೆ ಅನುದಾನ ಹಂಚಿಕೆ ಮತ್ತು ಯೋಜನೆಗಳ ಪೂರ್ಣಗೊಳಿಸುವಿಕೆ ಗಣನೀಯ ಪ್ರಮಾಣದಲ್ಲಿ ಏರಿಕೆಯಾಗಿದೆ. 2009–2014 ರವರೆಗೆ ಕರ್ನಾಟಕದಲ್ಲಿ ರೈಲ್ವೆ ಯೋಜನೆಗಳಿಗೆ ರೂ. 7,835 ದೊರಕಿದ್ದರೆ, ಅದೇ ಮೋದಿಜಿ ಆಡಳಿತಾವಧಿಯಲ್ಲಿ 2024–25 ನೇ ಸಾಲಿನ ಒಂದೇ ವರ್ಷದಲ್ಲಿ ರೂ.7,559 ಕೋಟಿ ಅನುದಾವನ್ನು ರಾಜ್ಯಕ್ಕೆ ನೀಡಲಾಗಿದೆ, ಇದು ಯು.ಪಿ.ಎ. ಆಡಳಿತಾವಧಿಯಲ್ಲಿ ನೀಡಿದ ಅನುದಾನಕ್ಕೆ ಹೋಲಿಕೆ ಮಾಡಿದರೆ ಒಂದೇ ವರ್ಷದಲ್ಲಿ ಬರೋಬ್ಬರಿ 9 ಪಟ್ಟು ಹೆಚ್ಚಿನ ಅನುದಾನವನ್ನು ಮೋದಿಜಿ ಸರ್ಕಾರ ನೀಡಿದೆ ಎಂದಿದ್ದಾರೆ.

ಯು.ಪಿ.ಎ. ಆಡಳಿತಾವಧಿಯಲ್ಲಿ 2009 ರಿಂದ 2014 ರವರೆಗೆ ಪ್ರತಿ ವರ್ಷ 113 ಕಿ.ಮೀ ಸರಾಸರಿಯಂತೆ 565 ಕಿ.ಮೀ ರೈಲ್ವೆ ಹಳಿ ನಿರ್ಮಾಣ ಮಾಡಿದರೆ, ಅದೇ ಮೋದಿಜಿ ಆಡಳಿತಾವಧಿಯಲ್ಲಿ 2014–2024 ರವರೆಗೆ ವರ್ಷಕ್ಕೆ ಸರಾಸರಿ 163 ಕಿ.ಮೀ ನಂತೆ ಒಟ್ಟು 1,633 ಕಿ.ಮೀ ರೈಲ್ವೆ ಹಳಿ ನಿರ್ಮಾಣ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

# ಪಿಎಸ್‌ಐ ಪರಶುರಾಮ್ ಪ್ರಕರಣ ಸಿಬಿಐ ತನಿಖೆಗೆ ಇಲ್ಲ

» **ಚಿತ್ರದುರ್ಗ**

ಪಿಎಸ್‌ಐ ಪರಶುರಾಮ್ ಕುಟುಂಬಸ್ಥರ ಮನಸ್ಸಿಗೆ ನೋವಾಗಿದೆ.. ನೋವಿನಲ್ಲಿ ಮಾತನಾಡುತ್ತಾರೆ.. ನಾವು ಸಾಂತ್ವನ ಹೇಳಿ ನಮ್ಮ ತೀರ್ಮಾನ ಹೇಳಿಬರುತ್ತೇವೆ. ನಾನು ಈಗಾಗಲೇ ಈ ಪ್ರಕರಣವನ್ನು ಸಿಒಡಿ ತನಿಖೆಗೆ ವಹಿಸಿದ್ದೇನೆ ಎಂದು ಗೃಹ ಸಚಿವರಾಧ ಜಿ.ಪರಮೇಶ್ವರ ತಿಳಿಸಿದರು.

ಚಿತ್ರದುರ್ಗಕ್ಕೆ ಭೇಟಿ ನೀಡಿದ್ದ ಅವರನ್ನು ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಗೃಹ ಸಚಿವರು ಬರುವುದಾದರೆ ಆರೋಪಿಗಳನ್ನು ಬಂಧಿಸಿ ಬರಲಿ ಎಂಬ ಪಿಎಸ್‌ಐ ಪರಶುರಾಮ್ ಕುಟುಂಬಸ್ಥರ ಹೇಳಿಕೆಗೆ ಹಾಗೂ ಪ್ರಕರಣವನ್ನು ಸಿಬಿಐ ವಹಿಸಬೇಕು ಎಂಬ ಪಿಎಸ್‌ಐ ಪರಶುರಾಮ್ ರವರ ಪತ್ನಿಯ



ಅಗ್ರಹಕ್ಕೆ ಪ್ರತಿಕ್ರಿಯಿಸಿದ ಸಚಿವರು, ಸಿಎಂ ವಿರುದ್ಧ ಆರ್ ಟಿಐ ಕಾರ್ಯಕರ್ತ ಕೃಷ್ಣ ದೂರು ವಿಚಾರಕ್ಕೆ ಪ್ರತಿಕ್ರಿಯಿಸಿ ನಾವು ಈಗಾಗಲೇ ದೇಸಾಯಿ ಕಮಿಷನ್ ಮಾಡಿದ್ದೇವೆ..ದೇಸಾಯಿ ಕಮಿಷನ್ಮುಂದೆ ದೂರು ಕೊಟ್ಟರೆ ಪರಿಶೀಲಿಸುತ್ತಾರೆ.. ತಪ್ಪಿದ್ದರೆ ವರದಿಯಲ್ಲಿ ಅನುಮೋದನೆ ಮಾಡುತ್ತಾರೆ.ಸಿಎಂ ರಾಜೀನಾಮೆ ಬಗ್ಗೆ ಬಿ.ವೈ ವಿಜಯೇಂದ್ರ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ ಆ ರೀತಿ ಬೇಡಿಕೆ ಆಸೆ ಅವರಿಗಿದೆ.. ನಮ್ಮಾಸೆ ಬೇರೆ ತರಹ ಇದೆ. ಎಂದರು. ಠಾಣೆಗಳಿಗೆ ಪೋಸ್ಟಿಂಗ್ ಗೆ ಲಕ್ಷ, ಕೋಟಿ ರೂ. ಲಂಚ ನೀಡಬೇಕು ಎಂಬ ನಿವೃತ್ತ ಐಪಿಎಸ್ ಅಧಿಕಾರಿ ಬಾಸ್ಕರ್ ರಾವ್ ಹೇಳಿಕೆಗೆ ಪ್ರತಿಕ್ರಿಯಿಸಿ ಮಾಹಿತಿಗಳಿದ್ದರೆ ನಮಗೂ ಹೇಳಿದರೆ ಕ್ರಮ ಕೈಗೊಳ್ಳೋಣ. ಪಿಎಸ್‌ಐ ನೇಮಕಾತಿಯಲ್ಲಿ ಹಗರಣ ಬಗ್ಗೆ ತನಿಖೆಯು ನಡೆಯುತ್ತಿದೆ ಹಗರಣದಲ್ಲಿ ಭಾಗಿಯಾಗಿದ್ದ ಎಡಿಜಿಪಿ ಜೈಲಿಗೆ ಹೋಗಿ ಬಂದು ಈಗ ಬೇಲ್ ಮೇಲೆ ಇದ್ದಾರೆ. ದಲಿತ ಸಿಎಂ ವಿಚಾರ ಚರ್ಚೆಗೆ ಬರುತ್ತಿಲ್ಲ..ಸುಮ್ಮನೆ ನೀವೆ ಹೇಳಬೇಡಿ.

# ಗಂಜಿಗುಂಟೆ : ನಿವೇಶನ ರಹಿತ 50ಕ್ಕೂ ದಲಿತ ಕುಟುಂಬಗಳಿಂದ ನಿವೇಶನಕ್ಕೆ ಒತ್ತಾಯಿಸಿ ಪ್ರತಿಭಟನೆ

» **ಚಳ್ಳಕೆರೆ**

ತಾಲ್ಲೂಕಿನ ಗಂಜಿಕುಂಟೆ ಗ್ರಾಮದ ಪರಿಶಿಷ್ಟ ಜಾತಿಯ ಸುಮಾರು 30ಕ್ಕೂ ಹೆಚ್ಚು ಕುಟುಂಬಗಳ ಸದಸ್ಯರು ಗ್ರಾಮದ ಗೋಮಾಳದಲ್ಲಿ ನಮಗೆ ವಾಸಕ್ಕೆ ನಿವೇಶನ ನೀಡಬೇಕೆಂದು ಒತ್ತಾಯಿಸಿ ತಾಲ್ಲೂಕು ಕಚೇರಿ ಮುಂದೆ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸುತ್ತಿದ್ದಾರೆ.

ಗ್ರಾಮದ ದಲಿತ ಮುಖಂಡ, ನಿವೇಶನ ವಂಚಿತ ಎನ್.ನಿಜಲಿಂಗಪ್ಪ ಈ ಬಗ್ಗೆ ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ಗ್ರಾಮದ ರಿ.ಸರ್ವೆ, ನಂ.105ರ ಸರ್ಕಾರಿ ಗೋಮಾಳದಲ್ಲಿ ದಲಿತ ಸಮುದಾಯದ ಸುಮಾರು 50ಕ್ಕೂ ಹೆಚ್ಚು ಕುಟುಂಬಗಳು ಗುಡಿಸಲು ಹಾಕಿಕೊಂಡು ವಾಸ ಮಾಡುತ್ತಿದ್ದಾರೆ. ಸರಿಸುಮಾರು 40 ವರ್ಷಗಳಿಂದ ದಲಿತ ಕುಟುಂಬಗಳು ಸದರಿ ಜಾಗದಲ್ಲಿ ವಾಸವಿದ್ದು, ಆಶ್ರಯ ಯೋಜನೆಯಡಿ ನಿವೇಶನ ನೀಡುವಂತೆ ತಾಲ್ಲೂಕು ಕಚೇರಿಗೆ ಅರ್ಜಿ ಸಲ್ಲಿಸಲಾಗಿತ್ತು.


ಪುಟ 2


## ಫಾಸ್ಟ್ ನ್ಯೂಸ್

### ಪೋಕ್ಸೋ ಕಾಯ್ದೆ ಕುರಿತು ಶಾಲಾ ಮಕ್ಕಳೊಂದಿಗೆ ಸಂವಾದ ಕಾರ್ಯಕ್ರಮ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಗೋನೂರು ಗ್ರಾಪಂ ವತಿಯಿಂದ ಇದೇ ಆಗಸ್ಟ್ 9ರಂದು ಬೆಳಿಗ್ಗೆ 10.30ಕ್ಕೆ ಗೋನೂರು ಗ್ರಾಮ ಪಂಚಾಯಿತಿ ಆವರಣದಲ್ಲಿ "ಬಾಲ್ಯ ವಿವಾಹ ನಿಷೇದ ಕಾಯ್ದೆ, ಪೋಕ್ಸೋ ಕಾಯ್ದೆ ಕುರಿತು ಸಾರ್ವಜನಿಕರಿಗೆ ಅರಿವು ಕಾರ್ಯಕ್ರಮ , ಶಾಲಾ ಮಕ್ಕಳೊಂದಿಗೆ ಸಂವಾದ" ಕಾರ್ಯಕ್ರಮ ಆಯೋಜಿಸಲಾಗಿದೆ. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂಧರ್ ಕುಮಾರ್ ಮೀನಾ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಆರ್.ಪ್ರಭಾಕರ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ರಕ್ಷಣಾಧಿಕಾರಿ ಸಿ.ಸವಿತ, ಚಿತ್ರದುರ್ಗ ತಾಲ್ಲೂಕು ಮಕ್ಕಳ ರಕ್ಷಣಾ ಸಮಿತಿ ಅಧ್ಯಕ್ಷರು ಹಾಗೂ ತಹಶೀಲ್ದಾರ್ ಡಾ.ನಾಗವೇಣಿ, ತಾಲ್ಲೂಕು ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಹನುಮಂತಪ್ಪ, ಗೋನೂರು ಗ್ರಾ. ಪಂ ಅಧ್ಯಕ್ಷೆ ಗುಂಡಮ್ಮ ಸಿದ್ದೇಶ್, ಉಪಾಧ್ಯಕ್ಷೆ ಜಯಮ್ಮ ತಿಪ್ಪೇಸ್ವಾಮಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹೆಚ್.ಯರ್ರಿಸ್ವಾಮಿ ಭಾಗವಹಿಸುವರು.

### ಮೋಟಾರ್ ಸೈಕಲ್ ವಿತ್ ಐಸ್ ಬಾಕ್ಸ್ ಘಟಕ ಯೋಜನೆಗೆ ಅರ್ಜಿ

» **ಚಿತ್ರದುರ್ಗ**

2020–21 ರಿಂದ 2023–24ನೇ ಸಾಲಿನ ಬಾಕಿ ಉಳಿದ ಕಾರ್ಯಕ್ರಮಗಳಿಗೆ ಮತ್ತು 2024–25ನೇ ಸಾಲಿನ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಮೋಟಾರ್ ಸೈಕ್ ವಿತ್‌ಐಸ್ ಬಾಕ್ಸ್ ಘಟಕದಡಿ ನೀಡಿದ ಹೆಚ್ಚುವರಿ ಗುರಿಗಳಿಗೆ ಜಿಲ್ಲೆಯ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 23 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಈ ಯೋಜನೆಯಡಿ 0.75 ಲಕ್ಷ ಘಟಕ ವೆಚ್ಚ ನಿಗಧಿಪಡಿಸಲಾಗಿದ್ದು, ಒಟ್ಟು 12 ಘಟಕಗಳನ್ನು ನಿರ್ಮಿಸಲು ಗುರಿ ಹೊಂದಿದ್ದು, ಮಹಿಳೆಯರಿಗೆ ಹಾಗೂ ಪರಿಶಿಷ್ಟ ಪಂಗಡಕ್ಕೆ ತಲಾ 5, ಪರಿಶಿಷ್ಟ ಜಾತಿಗೆ 2 ಘಟಕಗಳು ಮೀಸಲಿವೆ. ಸಾಮಾನ್ಯ ವರ್ಗದವರಿಗೆ ಘಟಕ ವೆಚ್ಚದ ಶೇ.40 ರಷ್ಟು ಹಾಗೂ ಮಹಿಳೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ಶೇ.60ರಷ್ಟು ಸಹಾಯಧನ ನೀಡಲಾಗುವುದು. ಆಸಕ್ತ ಫಲಾನುಭವಿಗಳು ನಿಗದಿತ ಸಮಯದೊಳಗೆ ಅರ್ಜಿಗಳನ್ನು ಸಂಬಂಧಿಸಿದ ತಾಲ್ಲೂಕಿನ ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ, ಚಳ್ಳಕೆರೆ ಹಾಗೂ ಮೊಳಕಾಲ್ಮುರು ಮೀನುಗಾರಿಕೆ ಸಹಾಯಕ ನಿರ್ದೇಶಕ ತುಳಸೀದಾಸ್ ಅವರ ಮೊಬೈಲ್ ಸಂಖ್ಯೆ 9342187356, ಹಿರಿಯೂರು ಮೀನುಗಾರಿಕೆ ಸಹಾಯಕ ನಿರ್ದೇಶಕ ಎನ್.ಮಂಜುನಾಥ್ ಅವರ ಮೊಬೈಲ್ 7022933310 ಹಾಗೂ ಹೊಸದುರ್ಗ ಮತ್ತು ಹೊಳಲ್ಕೆರೆ ಮೀನುಗಾರಿಕೆ ಸಹಾಯಕ ನಿರ್ದೇಶಕ ವೆಂಕಟೇಶ್ವರ ಅವರ ಮೊಬೈಲ್ ಸಂಖ್ಯೆ 9945004235 ಸಂಪರ್ಕಿಸಬಹುದು.

**ಪ್ರಮುಖ ಸುದ್ದಿ**

# ಅರ್ಹತೆಯ ಆಧಾರದ ಮೇಲೆ ಪ್ರೌಢ ಶಾಲೆಗೆ ಬಡ್ತಿ ನೀಡಿ

» **ಚಿತ್ರದುರ್ಗ**

2017ರ ಹೊಸ ವೃಂದ ಮತ್ತು ನೇಮಕಾತಿ ನಿಯಮಗಳನ್ನು 2016ಕ್ಕಿಂತ ಮೊದಲು ನೇಮಕಾತಿಯಾದವರಿಗೆ ಪೂರ್ವಾನ್ವಯಗೊಳಿಸಬಾರದು ಹಾಗೂ ಇದರಿಂದ ಪ್ರಾಥಮಿಕ ಶಾಲಾ ಸೇವಾ ನಿರತ ಶಿಕ್ಷಕರಿಗಾಗಿರುವ ಅನ್ಯಾಯವನ್ನು ಸರಿಪಡಿಸಬೇಕು, ಅರ್ಹ ಪ್ರಾಥಮಿಕ ಶಾಲಾ ಶಿಕ್ಷಕರಿಗೆ 2016ರ ಪೂರ್ವದಂತೆ ಅರ್ಹತೆಯ ಆಧಾರದ ಮೇಲೆ ಪ್ರೌಢ ಶಾಲೆಗೆ ಬಡ್ತಿ ನೀಡಬೇಕು ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರಿಗೆ 2016ರ ಪೂರ್ವದಂತೆ ಮುಖ್ಯ ಗುರುಗಳ ಹಾಗೂ ಹಿರಿಯ ಮುಖ್ಯ ಗುರುಗಳ ಹುದ್ದೆಗೆ ಸೇವಾ ಜೇಷ್ಠತೆಯ ಆಧಾರದ ಮೇಲೆ ಬಡ್ತಿ ನೀಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಜಿಲ್ಲಾ ಸಂಘದವತಿಯಿಂದ ಜಿಲ್ಲಾಡಳಿತಕ್ಕೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಿಗೆ ಬುಧವಾರ ಮನವಿಯನ್ನು ಸಲ್ಲಿಸಲಾಯಿತು.

ನಗರದ ಬಿಇಓ ಕಚೇರಿಯಿಂದ ಪ್ರಾರಂಭವಾದ ಪ್ರತಿಭಟನಾ ಮೆರವಣಿಗೆಯೂ ಡಾ.ಅಂಬೇಡ್ಕರ್ ವೃತ್ತದಲ್ಲಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಓನಕೆ ಒಬವ್ವ ವೃತ್ತದಲ್ಲಿ ಮಾನವ ಸರಪಳಿಯನ್ನು ನಿರ್ಮಾಣ




ಮಾಡಿ ಸರ್ಕಾರದ ವಿರುದ್ಧ ತಮ್ಮ ಅಕ್ರೋಶವನ್ನು ವ್ಯಕ್ತಪಡಿ ಘೋಷಣೆಯನ್ನು ಕೂಗಲಾಯಿತು.

ಕರ್ನಾಟಕ ರಾಜ್ಯವು ಶಾಲಾ ಶಿಕ್ಷಣದಲ್ಲಿ ಅನೇಕ ಹೊಸ ಉಪಕ್ರಮಗಳನ್ನು ತರುವುದರ ಮೂಲಕ ದೇಶದಲ್ಲಿ ಮಾದರಿಗಳನ್ನು ನಿರ್ಮಿಸಿದೆ, ಕಾಲಕಾಲಕ್ಕೆ ಆಗುವ ಶೈಕ್ಷಣಿಕ ಬದಲಾವಣೆಗಳನ್ನು ನಮ್ಮ ರಾಜ್ಯದಲ್ಲೂ ಶಾಲಾ ಶಿಕ್ಷಣ ಇಲಾಖೆ ಸಮರ್ಪಕವಾಗಿ ನಿರ್ವಹಿಸುತ್ತಾ ಬಂದಿರುವುದು ಶ್ಲಾಘನೀಯ. ಕರ್ನಾಟಕ ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಸುಮಾರು 1,88,532 ಶಿಕ್ಷಕರಲ್ಲಿ ಹಿರಿಯ ಮುಖ್ಯ ಶಿಕ್ಷಕರು, ಮುಖ್ಯ ಶಿಕ್ಷಕರು, ಸಹ ಶಿಕ್ಷಕರು, ವಿಶೇಷ ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಾ 1 ರಿಂದ 7, 1 ರಿಂದ 8ನೇ ತರಗತಿಗಳನ್ನು ಸಮರ್ಥವಾಗಿ ನಿರ್ವಹಣೆ ಮಾಡುತ್ತಾ ಬಂದಿದ್ದಾರೆ.ಓಅಖಿಇ ಹಾಗೂ ರಾಷ್ಟ್ರೀಯ ಶಿಕ್ಷಣ ನೀತಿಯ ಶಿಫಾರಸ್ಸುಗಳಿಗೆ ಅನುಕೂಲವಾಗುವಂತೆ ರಾಜ್ಯದ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯ ಪದನಾಮವನ್ನು ಬದಲಾಯಿಸಿ, ಹೊಸ ವೃಂದ ಹಾಗೂ ವೃಂದ ಬಲವನ್ನು ನಿರ್ಧರಿಸುವ ಕುರಿತು ಆದೇಶ ಹೊರಡಿಸಿದ ಪ್ರಾಥಮಿಕ ಶಾಲಾ ಸಹ ಶಿಕ್ಷಕ ವೃಂದವನ್ನು ಮುಖ್ಯವಾಗಿ ಪ್ರಾಥಮಿಕ ಶಾಲಾ ಶಿಕ್ಷಕರು 1 ರಿಂದ 5ಕ್ಕೆ1,12,467 ಹಾಗೂ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರು 6 ರಿಂದ 8ಕ್ಕೆ 51,781 ಎಂದು ವೃಂದವಾರು ಹುದ್ದೆಗಳನ್ನು ಮಂಜೂರಿಸಿ ಆದೇಶಿಸಿದೆ. ತತ್ಪರಿಣಾಮವಾಗಿ 2016ಕ್ಕಿಂತ ಮೊದಲು 1 ರಿಂದ 7, 1 ರಿಂದ 8 ವೃಂದಕ್ಕೆ ನೇಮಕಾತಿಯಾದ ಎಲ್ಲಾ ಸಹಶಿಕ್ಷಕರು ಪ್ರಾಥಮಿಕ ಶಾಲಾ ಶಿಕ್ಷಕರು 1 ರಿಂದ 5 ಎಂದು ಪರಿಗಣಿಸಿದ್ದು, ಶಿಕ್ಷಕರಿಗೆ ತೀವ್ರ ಅನ್ಯಾಯವಾಗಿದೆ. 2017ರ ಹೊಸ ವೃಂದಬಲ ನಿಗದಿಯಾಗುವವರೆಗೆ ಪ್ರಾಥಮಿಕ ಶಾಲಾ ಸಹ ಶಿಕ್ಷಕ ವೃಂದದಿಂದ ಪ್ರೌಢಶಾಲಾ ಸಹ ಶಿಕ್ಷಕ ಗ್ರೇಡ್–2 ವೃಂದಕ್ಕೆ ನಿಯಮಿತವಾಗಿ ಬಡ್ತಿ ನೀಡುವಲ್ಲಿ ಯಾವುದೇ ಸಮಸ್ಯೆಗಳು ಇರಲಿಲ್ಲ. ಪ್ರಾಥಮಿಕ ಶಾಲೆಗಳಲ್ಲಿ 2017ರ ಹೊಸ ವೃಂದ ಬಲ ನಿಗದಿಯಿಂದಾಗಿ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್–2ವೃಂದಕ್ಕೆ ಬಡ್ತಿ ನೀಡುವಾಗ ಗೊಂದಲಗಳು ಉಂಟಾದುದ್ದನ್ನು ನಮ್ಮ ಸಂಘಟನೆಯು ಬಲವಾಗಿ ತಿಳಿಸುತ್ತಾ ಬಂದಿದ್ದರೂ, ಅದನ್ನು ಪರಿಹರಿಸದೇ, ಮುಂದೂಡುತ್ತಾ ಬರಲಾಗಿದೆ.

1 ರಿಂದ 5 ಪ್ರಾಥಮಿಕ ಶಾಲಾ ಶಿಕ್ಷಕರೆಂದು ಪದನಾಮೀಕರಿಸಿರುವ 2016ಕ್ಕಿಂತ ಮೊದಲು ನೇಮಕವಾದ 1 ರಿಂದ 7, 1 ರಿಂದ 8 ವೃಂದದಪ್ರಾಥಮಿಕ ಶಾಲಾ ಸಹ ಶಿಕ್ಷಕರಲ್ಲಿ ಸುಮಾರು 80000ಕ್ಕೂ ಅಧಿಕ ಶಿಕ್ಷಕರು ಪದವಿಯೊಂದಿಗೆ ಬಿ.ಇಡಿ ವಿದ್ಯಾರ್ಹತೆ ಹೊಂದಿದ್ದರೂ ಇವರನ್ನು 6 ರಿಂದ8ಕ್ಕೆ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರೆಂದು ಪರಿಗಣಿಸದೇ ಇರುವುದು ದುರಾದೃಷ್ಟಕರ. ಇದರ ನಡುವೆ 2016ರಿಂದ ಇತ್ತೀಚೆಗೆ 6ರಿಂದ 8 ವೃಂದದ20110 ಶಿಕ್ಷಕರ ನೇಮಕಾತಿಯಾಗಿದ್ದು, ತತ್ಪರಿಣಾಮದಿಂದಾಗಿ ಅಷ್ಟೇ ಸಂಖ್ಯೆಯ 1 ರಿಂದ 5 ವೃಂದದ ಶಿಕ್ಷಕರ ಹೆಚ್ಚುವರಿ ಸಮಸ್ಯೆ ಸೃಷ್ಟಿಯಾಗಿತ್ತು. ಅದೇರೀತಿ ವರ್ಗಾವಣೆ ಪ್ರಕ್ರಿಯೆಯಲ್ಲೂ ಈ ವೃಂದ ಬಲದ ನಿಗದಿ ಸ್ಥಳಗಳ ಆಯ್ಕೆಯಲ್ಲಿ ತೀವ್ರವಾಗಿ ಶಿಕ್ಷಕರಿಗೆ ಸಮಸ್ಯೆ ಸೃಷ್ಟಿಸಿದೆ.ಇದರ ಜೊತೆಯಲ್ಲಿ ವೃಂದಬಲ ನಿಗದಿಯಿಂದ ವೇತನ ಶ್ರೇಣಿ ವ್ಯತ್ಯಾಸವಾಗಿ ಶಿಕ್ಷಕರ ಮನೋಸ್ಥೈರ್ಯದ ಮೇಲೆ ಋಣಾತ್ಮಕಪರಿಣಾಮವಾದಾಗ್ಯೂ, ಈಗಿನವರೆಗೂ 1 ರಿಂದ 5 ಶಿಕ್ಷಕ ವೃಂದದವರೆಂದು ಪರಿಗಣಿತವಾದ 1 ರಿಂದ 7, 1 ರಿಂದ 8ಕ್ಕೆ ನೇಮಕಾತಿ ಯಾದ ಶಿಕ್ಷಕರು ಯಾವುದೇ ಆರ್ಥಿಕ ಸೌಲಭ್ಯ ಬಯಸದೇ, 6 ರಿಂದ 8ನೇ ತರಗತಿ ನಿರ್ವಹಣೆ ಹಾಗೂ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸುತ್ತಾ ಬಂದಿದ್ದಾರೆ. ಇದೇಸಂದರ್ಭದಲ್ಲಿ 6 ರಿಂದ 8ನೇ ತರಗತಿಗೆ ನೇಮಕವಾದ 20110 ಶಿಕ್ಷಕರು ಕೇವಲ 6 ರಿಂದ 8ನೇ ತರಗತಿ ಬೋಧನೆ ಮಾತ್ರ ಮಾಡುತ್ತಿದ್ದು,1 ರಿಂದ 5ನೇ ತರಗತಿ ಬೋಧನೆಯಲ್ಲಿ ಭಾಗವಹಿಸುತ್ತಿಲ್ಲ.


ಪುಟ 2

## ಫಾಸ್ಟ್ ನ್ಯೂಸ್

### ವಿಶ್ವಕರ್ಮ ಸಮುದಾಯಗಳಿಗೆ ವಿವಿಧ ಯೋಜನೆಯ ಸಾಲ ಸೌಲಭ್ಯ ಅರ್ಜಿ ಆಹ್ವಾನ

» **ದಾವಣಗೆರೆ**

ಕರ್ನಾಟಕ ವಿಶ್ವಕರ್ಮ ಸಮುದಾಯ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಾದ ಪಂಚವೃತ್ತಿ ಅಭಿವೃದ್ಧಿಗೆ ಆರ್ಥಿಕ ನೆರವು, ಸ್ವಯಂ ಉದ್ಯೋಗ ನೇರಸಾಲ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಾತಂತ್ರ್ಯ ಅಮೃತ್ ಮಹೋತ್ಸವ ಮುನ್ನಡೆ ಯೋಜನೆಗಳ ಸಾಲ ಸೌಲಭ್ಯಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. 10ನೇ ತರಗತಿ, ದ್ವಿತೀಯ ಪಿ.ಯು.ಸಿ, ಡಿಪ್ಲೋಮ, ಪದವಿ, ಇಂಜಿನಿಯರಿಂಗ್ ವ್ಯಾಸಂಗವನ್ನು ಪೂರ್ಣಗೊಳಿಸಿರಬೇಕು, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾತಿ ಪಟ್ಟಿಯಲ್ಲಿ ನಮೂದಿಸಿದ ನಿಗಮದ ವ್ಯಾಪ್ತಿಗೆ ಒಳಪಡುವ ಜಾತಿಗಳಿಗೆ ಸೇರಿದವರಾಗಿರಬೇಕು. ಅಸಕ್ತರು 18 ರಿಂದ 25 ವರ್ಷದೊಳಗಿನವರಾಗಿರಬೇಕು. ಅರ್ಜಿಯನ್ನು ಸಲ್ಲಿಸಲು https://www.kaushalkar.com ಜಾಲತಾಣದಲ್ಲಿ ಸಲ್ಲಿಸಬಹುದಾಗಿದೆ. ಹಾಗೂ 2023-24ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿರುವ ಅರ್ಜಿದಾರರು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರಗ್ರಾಮಒನ್,ಬೆಂಗಳೂರುಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಅರ್ಜಿ ಸಲ್ಲಿಸಲು ಆಗಸ್ಟ್.31 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿಗಾಗಿ ನಿಗಮದ ವೆಬ್‌ಸೈಟ್ https://kvldc.karnataka.gov.inಇಲ್ಲಿ ಸಂಪರ್ಕಿಸಿ ಅಥವಾ ನಿಗಮದ ಸಹಾಯವಾಣಿ ಸಂಖ್ಯೆ: 08192-230934 ಗೆ ಸಂಪರ್ಕಿಸಬಹುದು ಎಂದು ಅಭಿವೃದ್ಧಿ ಕರ್ನಾಟಕ ವಿಶ್ವಕರ್ಮ ಸಮುದಾಯ ನಿಗಮ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

### ಸಾಲ, ಸೌಲಭ್ಯಗಳಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದಿಂದ ಈ ಸಮುದಾಯದವರಿಗೆ ವಿವಿಧ ಯೋಜನೆಗಳಡಿ ಸ್ವಯಂ ಉದ್ಯೋಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವ್ಯಾಸಂಗ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ನೇರಸಾಲ ಯೋಜನೆಡಿ ಸಾಲ, ಸೌಲಭ್ಯ ಒದಗಿಸಲು ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಸೇವಾ ಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್ , ಬೆಂಗಳೂರು ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರದಲ್ಲಿ ಆನ್‌ಲೈನ್ ಮೂಲಕ ಆಗಸ್ಟ್ 31 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿಗಾಗಿ ನಿಗಮದ ವೆಬ್‌ಸೈಟ್ www.kaad.karnataka.govt.in ಅಥವಾ ನಿಗಮದ ಸಹಾಯವಾಣಿ ಸಂ. 08192-230934 ಗೆ ಕರೆ ಮಾಡಬಹುದಾಗಿದೆ ಎಂದು ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

### ನಿಜಶರಣ ಅಂಬಿಗರ ಚೌಡಯ್ಯ ಸಮುದಾಯಗಳಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ನಿಜಶರಣ ಅಂಬಿಗರ ಚೌಡಯ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ ಜನಾಂಗದ ಸಮುದಾಯಕ್ಕೆ ಪ್ರಸಕ್ತ ಸಾಲಿನಲ್ಲಿ ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಸ್ವಯಂ ಉದ್ಯೋಗ ಸಾಲ ಮತ್ತು ಸಹಾಯಧನ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆಗಳಡಿ ಸಾಲ ಸೌಲಭ್ಯ ಒದಗಿಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಸೇವಾ ಸೇವಾ ಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮಒನ್, ಬೆಂಗಳೂರು ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರದಲ್ಲಿ ಆಗಸ್ಟ್ 30 ರೊಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿಗಾಗಿ ನಿಗಮದ ವೆಬ್‌ಸೈಟ್ https://kvldc.karnataka.gov.in ಅಥವಾ ನಿಗಮದ ಸಹಾಯವಾಣಿ ಸಂಖ್ಯೆ: 08192-230934 ಗೆ ಸಂಪರ್ಕಿಸಬಹುದು.

### ಡಿ.ದೇವರಾಜ್ ಅರಸ್ ಜನ್ಮ ದಿನಾಚರಣೆ

» **ದಾವಣಗೆರೆ**

ಡಿ.ದೇವರಾಜು ಅರಸುರವರ 109ನೇ ಜನ್ಮ ದಿನಾಚರಣೆ ಅಂಗವಾಗಿ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಇವರ ಅಧ್ಯಕ್ಷತೆಯಲ್ಲಿ ಆಗಸ್ಟ್ 8 ರಂದು ಬೆಳ್ಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಆಯೋಜಿಸಲಾಗಿದೆ.

#### ಅದ್ಧೂರಿ ಮೆರವಣಿಗೆ, ತರಾಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ

# ಆ.19ರಂದು ನುಲಿಯ ಚಂದಯ್ಯ ಜಯಂತಿ

» **ಚಿತ್ರದುರ್ಗ**

ಆ.19ರಂದು ಶಿವಶರಣ ನುಲಿಯ ಚಂದಯ್ಯ ಜಯಂತಿಯನ್ನು ಅದ್ಧೂರಿಯಾಗಿ ಆಚರಿಸಲು ತೀರ್ಮಾನಿಸಲಾಯಿತು. ಅಂದು ಬೆಳಿಗ್ಗೆ 9 ಗಂಟೆಗೆ ನಗರದ ನೀಲಕಂಠೇಶ್ವರ ದೇವಸ್ಥಾನದಿಂದ ನುಲಿಯ ಚಂದಯ್ಯನವರ ಭಾವಚಿತ್ರದ ಮೆರವಣಿಗೆ ನಡೆಸಿ, ನಂತರ ತರಾಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಜರುಗಲಿದೆ.

ಈ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಚರ್ಚಿಸಲಾಯಿತು.

ಶಿಷ್ಟಚಾರದ ಅನುಸಾರ ಕಾರ್ಯಕ್ರಮದ ಆಹ್ವಾನ ಪತ್ರಿಕೆ ಸಿದ್ಧಪಡಿಸಿ ಎಲ್ಲಾ ಜನಪ್ರತಿನಿಧಿಗಳ ನೀಡಿ, ಕಾರ್ಯಕ್ರಮಕ್ಕೆ ಆಹ್ವಾಸಬೇಕು. ನುರಿತ ಉಪನ್ಯಾಸಕರಿಂದ ನುಲಿಯ ಚಂದಯ್ಯ ಅವರ ಕುರಿತು ಉಪನ್ಯಾಸ ಏರ್ಪಡಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಸರ್ಕಾರದಿಂದ ಜಯಂತಿ ಆಚರಣೆ ರೂ.50ಸಾವಿರಅನುದಾನನೀಡಲಾಗುತ್ತದೆ. ಇದರಲ್ಲಿ ವೇದಿಕೆ ಸಜ್ಜುಗೊಳಿಸುವುದು, ಆಹ್ವಾನ ಪತ್ರಿಕೆ, ಉಪನ್ಯಾಸಕರ ಗೌರವಧನ, ಬ್ಯಾನರ್, ಸಂಗೀತ ಕಾರ್ಯಕ್ರಮ ಹಾಗೂ ಜಯಂತಿ ಆಗಮಿಸುವವರಿಗೆ ಉಪಹಾರದ ವ್ಯವಸ್ಥೆ ಕಲ್ಪಿಸುವುದಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದರು.

ಸಭೆಯಲ್ಲಿತಹಶೀಲ್ದಾರ್‌ಡಾ.ನಾಗವೇಣಿ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಕೊರಮ ಸಮಾಜದ ಅಧ್ಯಕ್ಷ ಕೃಷ್ಣಪ್ಪ, ಜಿಲ್ಲಾ ದೈಹಿಕ ಶಿಕ್ಷಣ ಅಧಿಕಾರಿ ಚಿದಾನಂದ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಸಮಾಜದ ಮುಖಂಡರು ಇದ್ದರು.

## 20ರಂದು ನಾರಾಯಣ ಗುರು ಜಯಂತಿ



» **ಚಿತ್ರದುರ್ಗ**

ಜಿಲ್ಲಾ ಕೇಂದ್ರದಲ್ಲಿ ಇದೇ ಆಗಸ್ಟ್ 20ರಂದು ಶ್ರೀ ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿಯನ್ನು ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ತೀರ್ಮಾನಿಸಲಾಯಿತು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಶ್ರೀ ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಆಚರಿಸುವ ಕುರಿತು ಅಗತ್ಯ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧ್ಯಕ್ಷತ 'ಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಚರ್ಚಿಸಲಾಯಿತು.

ಆರ್ಯ ಈಡಿಗರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಜೀವನ್ ಮಾತನಾಡಿ, ಆರ್ಯ ಈಡಿಗರ ಸಂಘವು ಸ್ಥಾಪನೆಯಾಗಿ 25 ವರ್ಷಗಳು ಪೂರೈಸಿದ್ದು, ಸಂಘದ ನೆನಪಿಗಾಗಿ ಈ ಬಾರಿಯ ಶ್ರೀ ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಕಾರ್ಯಕ್ರಮವನ್ನು ಸಮಾಜದ ವತಿಯಿಂದ ಅದ್ದೂರಿಯಾಗಿ ಆಚರಿಸಲು ತೀರ್ಮಾನಿಸಲಾಗಿದ್ದು, ಪ್ರತಿಭಾ ಪುರಸ್ಕಾರ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಮಾಜದ ಸಾಧಕರನ್ನು ಗೌರವಿಸುವ ಕಾರ್ಯಕ್ರಮವನ್ನೂ ಹಮ್ಮಿಕೊಳ್ಳಲಾಗುವುದು. ಹಾಗಾಗಿ ಸರ್ಕಾರದ ವತಿಯಿಂದ ಆಚರಿಸುವ ಜಯಂತಿ ಕಾರ್ಯಕ್ರಮವನ್ನು ಸರಳ ಹಾಗೂ ಸಾಂಕೇತಿಕವಾಗಿ ಆಚರಿಸುವಂತೆ ಸಲಹೆ ನೀಡಿದರು.ಜಿಲ್ಲಾಡಳಿತ, ಜಿಪಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಚಿತ್ರದುರ್ಗ ನಗರಸಭೆ ವತಿಯಿಂದ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಗಸ್ಟ್ 20ರಂದು ಬೆಳಿಗ್ಗೆ 11ಕ್ಕೆ ಶ್ರೀ ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಕಾರ್ಯಕ್ರಮವನ್ನು ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುವುದು. ಸಂಪನ್ಮೂಲ ವ್ಯಕ್ತಿಗಳಿಂದ ಬ್ರಹ್ಮಶ್ರೀ ನಾರಾಯಣ ಗುರುಗಳ ಕುರಿತು ಉಪನ್ಯಾಸ ಸಹ ನೀಡಲಾಗುವುದು. ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಸಭೆಯಲ್ಲಿ ಆರ್ಯ ಈಡಿಗರ ಸಂಘದ ಖಜಾಂಚಿ ಬಸವರಾಜ್, ತಾಲ್ಲೂಕು ಘಟಕದ ಅಧ್ಯಕ್ಷ ಲಕ್ಷ್ಮೀಕಾಂತ್, ತಹಶೀಲ್ದಾರ್ ಡಾ.ನಾಗವೇಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಜಿಲ್ಲಾ ದೈಹಿಕ ಶಿಕ್ಷಣ ಅಧಿಕಾರಿ ಚಿದಾನಂದ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಇದ್ದರು.

## 26ರಂದು ಕೃಷ್ಣ ಜಯಂತಿ: ಅದ್ಧೂರಿ ಆಚರಣೆಗೆ ನಿರ್ಧಾರ

**ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧ್ಯಕ್ಷತೆಯಲ್ಲಿ ಪೂರ್ವಸಿದ್ಧತಾ ಸಭೆ**



» **ಚಿತ್ರದುರ್ಗ**

ಜಿಲ್ಲಾಡಳಿತದ ವತಿಯಿಂದ ಇದೇ ಆಗಸ್ಟ್ 26ರಂದು ಜಿಲ್ಲಾ ಕೇಂದ್ರದಲ್ಲಿ ಶ್ರೀಕೃಷ್ಣ ಜಯಂತಿಯನ್ನು ಅದ್ದೂರಿ ಹಾಗೂ ಅರ್ಥ ಪೂರ್ಣವಾಗಿ ಆಚರಿಸ ಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಹೇಳಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಶ್ರೀಕೃಷ್ಣ ಜಯಂತಿ ಆಚರಿಸುವ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶ್ರೀ ಕೃಷ್ಣ ಜಯಂತಿಯನ್ನು ಆಗಸ್ಟ್ 26ರಂದು ಮಧ್ಯಾಹ್ನ 12ಕ್ಕೆ ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ಶ್ರೀಕೃಷ್ಣ ವೃತ್ತದ ಸಮೀಪದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಸರ್ಕಾರದ ಶಿಷ್ಟಾಚಾರದ ಅನುಸಾರ ಆಹ್ವಾನ ಪತ್ರಿಕೆ ಮುದ್ರಿಸಿ, ಜನಪ್ರತಿನಿಧಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸ 'ಲಾಗುವುದು. ಸಮಾರಂಭದಲ್ಲಿ ಶ್ರೀಕೃಷ್ಣ ಅವರ ಕುರಿತು ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಯಾದವ ಸಂಘದ ಅಧ್ಯಕ್ಷ ಮೀಸೆ ಮಹಲಿಂಗಪ್ಪ, ಕಾರ್ಯದರ್ಶಿ ಆನಂದಪ್ಪ, ತಹಶೀಲ್ದಾರ್ ಡಾ.ನಾಗವೇಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಜಿಲ್ಲಾ ದೈಹಿಕ ಶಿಕ್ಷಣ ಅಧಿಕಾರಿ ಚಿದಾನಂದ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಇದ್ದರು.

#### ವಿದ್ಯಾರ್ಥಿನಿಯರಿಗೆ ಮಹಿಳಾ ಸಬಲೀಕರಣ ಘಟಕದ ಡಿ.ಗೀತಾ ಕಿವಿಮಾತು

# ಅಸುರಕ್ಷಿತ ಸ್ಪರ್ಶದ ಬಗ್ಗೆ ಜಾಗರೂಕರಾಗಿರಿ

» **ಚಿತ್ರದುರ್ಗ**

ಬಾಲಕಿಯರು ಹಾಗೂ ವಿದ್ಯಾರ್ಥಿನಿಯರು ಪರಿಚಿತ ಅಥವಾ ಅಪರಿಚತ ವ್ಯಕ್ತಿಗಳ ಅಸುರಕ್ಷಿತ ಸ್ಪರ್ಶದ ಬಗ್ಗೆ ಜಾಗರೂಕರಾಗಿರಬೇಕು ಎಂದು ಮಹಿಳಾ ಸಬಲೀಕರಣ ಘಟಕದ ಡಿ.ಗೀತಾ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಹೊಳಲ್ಕೆರೆ ಪಟ್ಟಣದ ಎಂ.ಎಂ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಈಚೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನೆ ಕಚೇರಿ ಸಹಯೋಗದಲ್ಲಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಬಾಲಕಿಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳನ್ನು ತಡೆಯವಲ್ಲಿ ಸರ್ಕಾರ ಕಠಿಣ ಕಾನೂನುಗಳನ್ನು ಜಾರಿ ಮಾಡಿದೆ. ಪೋಕ್ಸೋ ಕಾಯ್ದೆ ಬಲವಾಗಿದ್ದು ಆರೋಪಿಗಳು ಕಠಿಣ ಶಿಕ್ಷೆಗೆ ಗುರಿಯಾಗುವರು.

ಮಕ್ಕಳ ರಕ್ಷಣೆಗಾಗಿ ಸುರಕ್ಷಿತ ಸ್ಪರ್ಶ ಮತ್ತು ಅಸುರಕ್ಷಿತ ಸ್ಪರ್ಶದ ಕುರಿತು ಪೋಷಕರು ತಿಳಿ ಹೇಳುವುದು ಅಗತ್ಯವಾಗಿದೆ. ಪರಿಚಿತ ಅಥವಾ ಅಪರಿಚಿತರೇ ಆಗಿರಲಿ ಕೆಟ್ಟ ಮನೋಭಾವದಿಂದ ಸ್ಪರ್ಶಿಸಿದರೆ ಮಕ್ಕಳು ಪ್ರತಿರೋಧ ತೋರಿ ಪಾಲಕರಲ್ಲಿ ವಿಷಯ ಹಂಚಿಕೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ ಬಾಲ್ಯ ವಿವಾಹ ಹಾಗೂ ಬಾಲತಾಯಂದಿರ ಸಂಖ್ಯೆ ಹೆಚ್ಚಾಗುತ್ತಿದೆ. ಇದನ್ನು ತಡೆಹಿಡಿಯುವ ನಿಟ್ಟಿನಲ್ಲಿ ಕುಟುಂಬ ಪೋಷಕರ ಪಾತ್ರ ಪ್ರಮುಖವಾಗಿದೆ. ಮಹಿಳೆ ಮತ್ತು ಮಕ್ಕಳ ಮೇಲೆ ನಡೆಯುತ್ತಿರುವ ಲೈಂಗಿಕ ದೌರ್ಜನ್ಯವನ್ನು ತಡೆಯಲು ಮಕ್ಕಳ ಸಹಾಯವಾಣಿ ಸಂಖ್ಯೆ 1098 ಹಾಗೂ ಮಹಿಳಾ ಸಹಾಯವಾಣಿ ಸಂಖ್ಯೆ 181 ಈ ನಂಬರಿಗೆ ಕರೆ ಮಾಡಬಹುದು. ಕರೆ ಮಾಡಿದವರು ಹೆಸರು ಗೌಪ್ಯವಾಗಿ ಇರಿಸಲಾಗುವುದು. ಸಹಪಾಠಿ ಗೆಳತಿಯರು ಬಾಲ್ಯ ವಿವಾಹಕ್ಕೆ ತುತ್ತಾಗುತ್ತಿದ್ದರೆ ಈ ಸಂಖ್ಯೆಗಳಿಗೆ ಕರೆ ಮಾಡಿ ರಕ್ಷಿಸುವಂತೆ ವಿದ್ಯಾರ್ಥಿಗಳಿಗೆ ಗೀತಾ.ಡಿ ಹೇಳಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ, ಸಹಾಯಕ ಪ್ರಾಧ್ಯಾಪಕರು ಮತ್ತು ಮಹಿಳಾ ಸಾಂತ್ವನ ಕೇಂದ್ರ ಸಿಬ್ಬಂದಿ ಹಾಜರಿದ್ದರು.

## ಗಂಜಿಗುಂಟೆ : ನಿವೇಶನ ರಹಿತ 50ಕ್ಕೂ ದಲಿತ ಕುಟುಂಬಗಳಿಂದ ನಿವೇಶನಕ್ಕೆ ಒತ್ತಾಯಿಸಿ ಪ್ರತಿಭಟನೆ



» **ಮೊದಲ ಪುಟದಿಂದ**

ಆದರೆ, ಈ ಬಗ್ಗೆ ಯಾವುದೇ ಕ್ರಮವನ್ನು ತಾಲ್ಲೂಕು ಆಡಳಿತ ಇದುವರೆಗೂ ಕೈಗೊಂಡಿಲ್ಲ. ಈ ಮಧ್ಯೆ ಗ್ರಾಮದ ಕೆಲಬಲಡ್ಯ ಶಕ್ತಿಗಳು ಸುಮಾರು ಒಂದರಿಂದ ಎರಡು ಎಕರೆ ಪ್ರದೇಶದಲ್ಲಿ ಹುಲ್ಲು ಬಣವೆಗಾಗಿ ಅಕ್ರಮಿಸಿ ಅಲ್ಲೇ ಶೆಡ್ ನಿರ್ಮಾಣ ಮಾಡಿಕೊಂಡಿದ್ದಾರೆ. ಇದರಿಂದ ದಲಿತ ಸಮುದಾಯದ ಕುಟುಂಬಗಳಿಗೆ ಮುಂದಿನ ದಿನಗಳಲ್ಲಿ ತೊಂದರೆ ಎದುರಾಗಲಿದೆ. ಆದ್ದರಿಂದ ದಲಿತರು ವಾಸಿಸುವ ಕುಟುಂಬಗಳಿಗೆ ತಾಲ್ಲೂಕು ಆಡಳಿತ ನಿವೇಶನವನ್ನು ಕೂಡಲೇ ನೀಡಬೇಕೆಂದು ಒತ್ತಾಯಿಸಿ ಮುಷ್ಕರ ನಡೆಸಲಾಗುತ್ತಿದೆ. ಈ ಬಗ್ಗೆ ಈಗಾಗಲೇ ಕ್ಷೇತ್ರದ ಶಾಸಕ ಟಿ.ರಘುಮೂರ್ತಿಯವರಿಗೂ ಸಹ ಲಿಖಿತ ಮೂಲಕ ಮನವಿ ಮಾಡಲಾಗಿದೆ. ತಹಶೀಲ್ದಾರ್ ಸಹ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸುವ ಭರವಸೆ ನೀಡಿದ್ದರು. ಅಧಿಕಾರಿಗಳು ಬಂದು ಪರಿಶೀಲನೆ ನಡೆಸಿ ನಮಗೆ ಖಾಲಿನಿವೇಶನ ಮಂಜೂರು ಮಾಡುವ ತನಕ ಮುಷ್ಕರವನ್ನು ಮುಂದುವರೆಸುವುದಾಗಿ ತಿಳಿಸಿದರು. ಪ್ರತಿಭಟನೆಯಲ್ಲಿ ಗ್ರಾಮದ ಮುಖಂಡ ಎನ್.ಮಹಲಿಂಗಪ್ಪ, ಆರ್.ರಂಗನಾಥ, ಎನ್.ಶ್ರೀನಿವಾಸ್, ಆರ್.ರಮೇಶ್, ಕೆ.ಪ್ರಹ್ಲಾದ, ಎನ್.ಹರೀಶ್, ದೇವಿರಮ್ಮ, ಕರಿಯಮ್ಮ, ಜಯಮ್ಮ, ಕಮಲಮ್ಮ ಮುಂತಾದವರು ಇದ್ದರು.

**ಪ್ರಮುಖ ಸುದ್ದಿ**

# ಅರ್ಹತೆಯ ಆಧಾರದ ಮೇಲೆ ಪ್ರೌಢ ಶಾಲೆಗೆ ಬಡ್ತಿ ನೀಡಿ

» **ಮೊದಲ ಪುಟದಿಂದ**

ಆದರೆ 1 ರಿಂದ 7 ಮತ್ತು 1 ರಿಂದ 8ಕ್ಕೆ ನೇಮಕಾತಿಯಾದ ಪ್ರಾಥಮಿಕ ಶಾಲಾ ಸಹಶಿಕ್ಷಕರು ಇಲಾಖೆಗೆ ಮುಜುಗರವಾಗದಂತೆ 1 ರಿಂದ 8ನೇ ತರಗತಿವರೆಗಿನ ಎಲ್ಲಾ ಶೈಕ್ಷಣಿಕ ಚಟುವಟಿಕೆಗಳನ್ನು ಸಮರ್ಥವಾಗಿ ನಡೆಸಿಕೊಂಡುಬರುತ್ತಿದ್ದಾರೆ.ಸಾಮಾಜಿಕ ನ್ಯಾಯದ ಪರ ಧ್ವನಿಯಾಗಿರುವ ತಾವುಗಳು ಲಕ್ಷಾಂತರ ಪ್ರಾಥಮಿಕ ಶಾಲಾ ಶಿಕ್ಷಕರಿಗಾದ ಅನ್ಯಾಯವನ್ನು ಗಂಭೀರವಾಗಿ ಪರಿಗಣಿಸಿ, ತುರ್ತಾಗಿ ಒಂದು ಕಾರ್ಯಕಾರಿ ಆದೇಶವನ್ನು ಹೊರಡಿಸಲು ಸರಕಾರವನ್ನು ಒತ್ತಾಯಿಸಬೇಕು. ಈ ಮೂಲಕ ಉಲ್ಲಂಘನೆಯಾಗಿರುವ ನಿಯಮಗಳನ್ನು ಸರಿಪಡಿಸುವುದರ ಜೊತೆಗೆ ನಿರಂತರ ಸೇವಾನುಭವ ಮತ್ತು ಉನ್ನತ ವಿದ್ಯಾರ್ಹತೆ ಹೊಂದಿರುವ ಸೇವಾನಿರತ ಶಿಕ್ಷಕರಿಗೆ ಯಾವುದೇ ರೀತಿಯ ತಾರತಮ್ಯ ಹಾಗೂ ಅನ್ಯಾಯವಾಗದಂತೆ ನಿಯಮ ರೂಪಿಸಬೇಕು ಎಂದು ಆಗ್ರಹಿಸಲಾಯಿತು. 2017 ರವರೆಗೆ ನೇಮಕವಾದ ಶಿಕ್ಷಕರನ್ನು 1 ರಿಂದ 7ಕ್ಕೆ ನೇಮಕವಾದ ಶಿಕ್ಷಕರೆಂದು ಪರಿಗಣಿಸಿ, ಉಲ್ಲೇಖ (1)ರ ಹೊಸ ವೃಂದ ಮತ್ತುನೇಮಕಾತಿ ನಿಯಮಗಳು, 2017ರ ನಂತರ ನೇಮಕವಾದ ಶಿಕ್ಷಕರಿಗೆ ಅನ್ವಯಿಸಬೇಕು ಹಾಗೂ ಯಾವುದೇ ಕಾರಣಕ್ಕೂ 2016ಕ್ಕಿಂತ ಮೊದಲುನೇಮಕಾತಿಯಾದವರಿಗೆ ಪೂರ್ವಾನ್ವಯಗೊಳಿಸಬಾರದು ಹಾಗೂ ಪದವಿ ಪೂರೈಸಿದ ಎಲ್ಲರಿಗೂ ಸೇವಾ ಜೇಷ್ಠತೆಯೊಂದಿಗೆ "ಪದವೀಧರ ಶಿಕ್ಷಕರೆಂದು" ಪದನಾಮೀಕರಿಸುವುದು.



ಉಲ್ಲೇಖ (1)ರ 2017 ರ ವೃಂದ ಮತ್ತು ನೇಮಕಾತಿ ನಿಯಮಗಳು 2016 ಕ್ಕಿಂತ ಮುಂಚೆ ನೇಮಕಾತಿ ಹೊಂದಿದ ಶಿಕ್ಷಕರಿಗೆಅನ್ವಯವಾಗುವುದಿಲ್ಲ ಎಂದು ಕಾರ್ಯಾದೇಶ ಹೊರಡಿಸಿ, ಮೂಲತ: 1-7/8 ಕ್ಕೆ ನೇಮಕ ಹೊಂದಿದವರನ್ನು ಕಖಖ ಎಂದು ಪದನಾಮ ಮಾಡಿ 1-5 ಕ್ಕೆ ಸೀಮಿತಗೊಳಿಸಿರುವುದನ್ನು ಹಿಂಪಡೆಯಬೇಕು. ಅರ್ಹ ವಿದ್ಯಾರ್ಹತೆ ಪೂರೈಸಿದ 2016ಕ್ಕಿಂತ ಮೊದಲು ನೇಮಕಾತಿಯಾದ ಎಲ್ಲಾ 1 ರಿಂದ 8ನೇ ತರಗತಿಗೆ ಪ್ರಾಥಮಿಕ ಶಾಲಾ ಶಿಕ್ಷಕರ ಸಂಖ್ಯೆಮುಗಿಯುವವರೆಗೂ ಈ ಮೊದಲಿನಂತೆ ಅರ್ಹತೆಯ ಆಧಾರದ ಮೇಲೆ ಪ್ರೌಢ ಶಾಲೆಗೆ ಬಡ್ತಿ ನೀಡಬೇಕು. ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಈ ಪೂರ್ವದಂತೆ ಮುಖ್ಯ ಗುರುಗಳ ಹಾಗೂ ಹಿರಿಯ ಮುಖ್ಯ ಗುರುಗಳ ಹುದ್ದೆಗೆ ಸೇವಾ ಜೇಷ್ಠತೆಯ ಆಧಾರದಮೇಲೆ ಬಡ್ತಿ ನೀಡಬೇಕು. ಅರ್ಹ ವಿದ್ಯಾರ್ಹತೆ (ಪದವಿ+ಶಿಕ್ಷಣ ತರಬೇತಿ) ಹೊಂದಿದ 2016ಕ್ಕಿಂತ ಪೂರ್ವದಲ್ಲಿ ನೇಮಕಾತಿ ಆಗಿರುವ ಪ್ರಾಥಮಿಕ ಶಾಲಾ ಸಹಶಿಕ್ಷಕರಿಗೆ ಸೇವಾ ಜೇಷ್ಠತೆಯ ರಕ್ಷಣೆ ಯೊಂದಿಗೆ ಬಡ್ತಿ ನೀಡುವುದು.ಉಲ್ಲೇಖ (1)ರಂತೆ ಈ ಮೇಲಿನ ಪ್ರಮುಖ ಅಂಶಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ 2017ರಲ್ಲಿ ರೂಪಿತಗೊಂಡಿರುವ ಹೊಸ ವೃಂದಮತ್ತು ನೇಮಕಾತಿ ನಿಯಮಗಳನ್ನು 2016ಕ್ಕಿಂತ ಮೊದಲು ನೇಮಕಾತಿಯಾದವರಿಗೆ ಪೂರ್ವಾನ್ವಯಗೊಳಿಸಬಾರದೆಂದು ಹಾಗೂ 2016ಕ್ಕಿಂತಮೊದಲು ನೇಮಕಾತಿಯಾದ ಸರ್ವರಿಗೂ ಈ ಹಿಂದಿನಂತೆ ಪ್ರೌಢ ಶಾಲೆಗಳಿಗೆ ವಿದ್ಯಾರ್ಹತೆಯ ಆಧಾರದ ಮೇಲೆ ಬಡ್ತಿ ನೀಡುವುದು ಹಾಗೂ ಮುಖ್ಯ ಗುರುಗಳ ಹುದ್ದೆಗಳಿಗೆ ಸೇವಾ ಜೇಷ್ಠತೆಯಂತೆ ಬಡ್ತಿ ನೀಡಬೇಕಾಗಿ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಜಿಲ್ಲಾ ಸಂಘದ ಗೌರವಾಧ್ಯಕ್ಷರಾದ ಕೆ.ವೀರಣ್ಣ, ಅಧ್ಯಕ್ಷರಾದ ಮಹಾಂತೇಶ್, ಜಿಲ್ಲಾ ಪ್ರದಾನ ಕಾರ್ಯದರ್ಶಿ ಹನುಮಂತಪ್ಪ, ಕೋಶಾಧ್ಯಕ್ಷರಾದ ಮಲ್ಲಿಕಾರ್ಜನ್, ಕಾರ್ಯಾಧ್ಯಕ್ಷರಾದ ಕೃಷ್ಣಪ್ಪ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಮಡಿವಾಳ ಸಮುದಾಯದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ

» ದಾವಣಗೆರೆ

ದಾವಣಗೆರೆ ಜಿಲ್ಲಾ ಮಡಿವಾಳ ಮಾಚಿದೇವ ಸಂಘದಿಂದ ವಿನೋಬಾ ನಗರದಲ್ಲಿನ ಮಡಿವಾಳ ಮಾಚಿದೇವ ಸಮುದಾಯ ಭವನದಲ್ಲಿ ಮಡಿವಾಳ ಸಮುದಾಯದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದ್ದು, 2023-24ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿಯುಸಿಯಲ್ಲಿ ಶೇ.70ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿ ಉತ್ತೀರ್ಣರಾದ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕೆ ಅರ್ಜಿಗಳನ್ನು ಸಲ್ಲಿಸಬಹುದು. ಅರ್ಹ ವಿದ್ಯಾರ್ಥಿಗಳು ಆಗಸ್ಟ್ 15ರೊಳಗೆ ಸ್ವವಿವರವುಳ್ಳ ಅರ್ಜಿಗಳನ್ನು ವಿನೋಬಾ ನಗರದ 1ನೇ ಮುಖ್ಯರಸ್ತೆಯ, 17ನೇ ತಿರುವಿನಲ್ಲಿನ ಮಡಿವಾಳ ಮಾಚಿದೇವ ಸಮುದಾಯ ಭವನ, ದಾವಣಗೆರೆ ಇಲ್ಲಿಗೆ ಎಸ್.ಎಸ್.ಎಲ್.ಸಿ. ಹಾಗೂ ದ್ವಿತಿಯ ಪಿಯುಸಿ ಅಂಕಪಟ್ಟಿ, ವರ್ಗಾವಣೆ ಪತ್ರ (ಟಿಸಿ), ತಮ್ಮ ಇತ್ತೀಚಿನ 2 ಪಾಸ್‌ಪೋರ್ಟ್ ಭಾವಚಿತ್ರಗಳೊಂದಿಗೆ ತಮ್ಮ ದಾಖಲಾತಿಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಎಂ.ನಾಗೇಂದ್ರಪ್ಪ- 9448000077, ಆರ್.ಎನ್.ಧನಂಜಯಪ್ಪ-9844001462, ಸುರೇಶ್ ಎಂ.ಕೋಗುಂಡೆ- 9880497271, ಸಿ.ಗುಡ್ಡಪ್ಪ- 8892624949, ಪಿ.ಮಂಜುನಾಥ್- 9980087033ಗೆ ಸಂಪರ್ಕಿಸಬಹುದು.

### ಆ.12ರಂದು ಪ್ರಥಮ ಚಿಕಿತ್ಸೆ ಕುರಿತು ಕಾರ್ಯಾಗಾರ

» ಚಿತ್ರದುರ್ಗ

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಹಾಗೂ ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ವತಿಯಿಂದ ಇದೇ ಆಗಸ್ಟ್ 12ರಂದು ಮಧ್ಯಾಹ್ನ 3ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ "ವಿಪತ್ತು ನಿರ್ವಹಣೆ ಹಾಗೂ ಪ್ರಥಮ ಚಿಕಿತ್ಸೆ" ಕುರಿತು ಕಾರ್ಯಾಗಾರ ಆಯೋಜಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ.

### ಮೂಡ ಹಗರಣದಲ್ಲಿ ಯಾವುದೇ ಹುರುಳಿಲ್ಲ-ಡಾ: ಎಂ.ಹೆಚ್.ಕೃಷ್ಣಮೂರ್ತಿ

» ಹೊಸದುರ್ಗ

ಒಂದು ನೂರ ಮೂವತ್ತಾರು ಜನ ಬಹುಮತ ವಿರುವಂತಹ ಶಾಸಕರನ್ನೊಳಗೊಂಡು ಬಹುಮತದಿಂದ ಚುನಾಯಿತರಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅವರ ರಾಜಕೀಯ ಜೀವನದಲ್ಲಿ ಯಾವುದೇ ಒಂದು ಕಪ್ಪು ಚುಕ್ಕಿ ಇಲ್ಲದೆ ರಾಜಕೀಯ ಜೀವನ ನಡೆಸುತ್ತಿದ್ದಾರೆ ಇಂತಹ ಸಂಧರ್ಬದಲ್ಲಿ ಮೂಡ ಅಗರಣದಲ್ಲಿ ಯವುದೇ ಹುರುಳಿಲ್ಲ ಎಂದು ಕರ್ನಾಟಕ ಪ್ರದೇಶಿಕ ಕುರುಬರ ಸಂಘದ ಉಪಾಪಾಧ್ಯಕ್ಷ ಡಾ: ಎಂ.ಹೆಚ್.ಕೃಷ್ಣಮೂರ್ತಿ ಹೇಳಿದರು.

ಪಟ್ಟಣದಲ್ಲಿ ಬುಧವಾರ ಪತ್ರಿಕಾ ಹೇಳಿಕೆ ನೀಡಿರುವ ಅವರು ಎಲ್ಲಾ ಶೋಷಿತ ಬಡವರ ಎಲ್ಲಾ ಸಮಾಜದ ಎಳಿಗೆಗಾಗಿ ಶ್ರಮಿಸುತ್ತಿರುವ ವ್ಯಕ್ತಿತ್ವ ಸಿ.ಎಂ. ಸಿದ್ದರಾಮಯ್ಯನವರದ್ದು ಇಂದು ನುಡಿದಂತೆ ನಡೆದಿದ್ದೇವೆ ಎಂದು ಹೇಳಿ ಕೊಟ್ಟಂತಹ ಗ್ಯಾರಂಟಿಗಳನ್ನ ಅನುಷ್ಠಾನಕ್ಕೆ ತಂದು ಹಲವಾರು ಯೋಜನೆಗಳನ್ನ ಬಡವರಿಗಾಗಿ ಯೋಜನೆಗಳನ್ನ ಜಾರಿಗೆ ತಂದು ನುಡಿದಂತೆ ನಡೆದಿದ್ದಾರೆ.

ಇಂತಹುಗಳನ್ನ ಸಹಿಸದೆ ಇರುವಂತಹ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಮುಖಂಡರುಗಳು ಯಾವುದೇ ರೀತಿಯಿಂದ ಸಿದ್ದರಾಮಯ್ಯನವರ ತಪ್ಪುಗಳು ಸಿಗದೇ ಇರುವುದರಿಂದ ಮುಡಾ ಹಗರಣ ಅದು ಜಿಜೆಪಿ ಸರ್ಕಾರ ಇದ್ದಾಗ ನಿವೇಶನ ಕೊಟ್ಟಿದ್ದು ಬಿಜೆಪಿಯವರು ಕೊಟ್ಟಾಗಲೇ ನೋಡಿಕೋಳ್ಳಬಹುದಿತ್ತು ಆಗಲೇ ಇದರ ಬಗ್ಗೆ ತನಿಖೆ ಮಾಡಬಹುದಿತ್ತು. ಆದರೆ ಈಗ ಸಿದ್ದರಾಮಯ್ಯನವರಿಗೆ ಚ್ಯುತಿ ಬರುವಂತಹ ವ್ಯವಸ್ಥಿತವಾದ ಸಂಚನ್ನ ಮಾಡುತ್ತಿದ್ದಾರೆ ಇದರಲ್ಲಿ ಯಾವುದೇ ಹುರುಳಿಲ್ಲ. ಸತ್ಯಾಂಶವಿಲ್ಲ, ಸತ್ಯಾಂಶ ಇಲ್ಲದೆ ಇರುವಂತಹದ್ದು, ಬಿಜೆಪಿಯವರು ಪಾದಯಾತ್ರೆ ಮಾಡೋ ನಿಟ್ಟಿನೊಳಗೆ ಅವರ ಮುಖಕ್ಕೆ ಕಪ್ಪು ಮಸಿ ಬಳಿಯುವಂತಹ ಪ್ರಯತ್ನ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು. ಶುದ್ದ ಅಸ್ತ ಹಾಗೂ ಮಹಾನ್ ಜನಾನುರಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅಹಿಂದ ಮುಖ್ಯಮಂತ್ರಿ ಎಂದೇ ಅವರಿಗೆ ತೊಂದರೆ ಕೊಡುತ್ತಿದ್ದಾರೆ. ಕುರುಬ ಸಮುದಾಯ ಇರಬಹುದು ಹಿಂದುಳಿದ ಶೋಷಿತ ಅಲ್ಪ ಸಂಖ್ಯಾತ ಎಲ್ಲಾ ಸಮುದಾಯಗಳು ಸಹಾ ಅವರ ಬೆಂಬಲಕ್ಕಿವೆ, ಇಡೀ ಕರ್ನಾಟಕ ರಾಜ್ಯವೇ ಅವರ ಬನ್ನ ಹಿಂದೆ ಇದೆ, ಬೆಂಬಲಕ್ಕಿದೆ ಇಂತವರಿಗೆ ಯಾರೇ ಆಗಲಿ ಅವರ ಬಗ್ಗೆ ಕಪ್ಪು ಚಿಕ್ಕಿ ತೋರಿಸಲು ಹೋದರೆ ಅದು ನಡೆಯುವುದಿಲ್ಲ ಎಂದರು. ಅಬ್ರಾಹಿಂ ಒಬ್ಬ ಬ್ಲಾಕ್ ಮೇಲರ್ ಅವರು ಕೊಟ್ಟಿರುವ ದೂರನ್ನ ಮೂರು ಗಂಟೆಯೊಳಗೆ ಸನ್ಮಾನ್ಯ ಗೌರ್ನರ್ ಅವರು ನೋಟೀಸ್ ನೀಡುವ ಪ್ರಯತ್ನ ನಡೆದಿದೆ ಎಂದರೆ ಇದಕ್ಕಿಂತ ಉನ್ನತವಾದ ಅಗರಣಗಳು ಬಿಜೆಪಿಯಲ್ಲಿ ಬಹಳಷ್ಟಿವೆ ಆದರೆ ಅವ್ಯಾವಕ್ಕೂ ಸಹಾ ಈ ತರಹ ಕ್ರಮ ತಗೆದುಕೊಂಡಿಲ್ಲ ಎಂದು ಆರೋಪಿಸಿದ ಅವರು ಇದರಿಂದ ಜನರನ್ನ ದಾರಿ ತಪ್ಪಿಸಲು ಸಾಧ್ಯವಿಲ್ಲ ಜನರಿಗೆ ಸಿದ್ದರಾಮಯ್ಯನವರ ಬಗ್ಗೆ ಗೊತ್ತಿದೆ ಎಂಥ ಪ್ರಮಾಣಿಕರಿದ್ದಾರೆ ಎಂಬುದು.ಮೂರು ಎಕರೆ ಅದಿನಾರು ಗುಂಟೆ ಅವರ ಜಮೀನಿತ್ತು ಅದನ್ನ ಮುಡಾ ವಶಪಡಿಸಿಕೋಂಡಿತು. ಅದರ ಬದಲಾಗಿ 50*50 ಸೈಟ್ ನೀಡಲಾಗಿದೆ ಬಿಜೆಪಿ ಸರ್ಕಾರ ಇಂಥಾ ವಿವೇಚ ಕೃತ್ಯವನ್ನ ಮಾಡಿ ಪಾದಯಾತ್ರೆ ಮಾಡುವ ಮೂಲಕ ಹೇನಾದರು ಮಾಡಿ ಸರ್ಕಾರ ಉರುಳಿಸಬೇಕು ಎಂದು ಹೋರಟಿರುವುದು ನಾಚಿಕೆಗೇಡಿತನ ಎಂದರು.

### ತಾಯಿ ಎದೆ ಹಾಲಿನಿಂದ ಮಗುವಿನ ರೋಗ ನಿರೋಧಕ ಶಕ್ತಿ ಹೆಚ್ಚಳ

# ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ

» ದಾವಣಗೆರೆ

ಬಾಪೂಜಿ ಆಸ್ಪತ್ರೆ, ಜೆ.ಜೆ.ಎಂ. ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಆಗಸ್ಟ್ 7 ರಂದು ಆಯೋಜಿಸಲಾಗಿದ್ದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮವನ್ನು ಮುಖ್ಯ ನ್ಯಾಯಿಕ ದಂಡಾಧಿಕಾರಿ ಹಾಗೂ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ನಿವೇದಿತಾ ಟಿ.ಎಂ. ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು ತಾಯಿಯ ಎದೆ ಹಾಲಿನ ಮಹತ್ವ ಹೊಂದಿದ್ದು ತಾಯಿಯ ಎದೆ ಹಾಲು ಕುಡಿಯುವುದರಿಂದ ಮಗುವಿನ ರೋಗ ನಿರೋಧಕ ಶಕ್ತಿ ಹೆಚ್ಚಳವಾಗಲಿದೆ. ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆ ತಡೆಗಟ್ಟುವಿಕೆ, ಮಕ್ಕಳ ಬಾಲಾಪರಾಧಗಳನ್ನು ತಡೆಗಟ್ಟುವಿಕೆ ಕುರಿತು ಮಾಹಿತಿ ನೀಡಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ. ಕರೆಣ್ಣನವರ್ ಮಾತಾನಾಡಿ, ಸ್ತನ್ಯಪಾನದ ಕ್ರಮಬದ್ಧ ನಿಯಮಗಳು ಹಾಗೂ ಮುಂಚೂಣಿ ಕಾರ್ಯಕರ್ತೆಯರಾದ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಸಮುದಾಯದಲ್ಲಿ ಮಕ್ಕಳ ತಾಯಂದಿರಿಗೆ ಉತ್ತಮ ಮಾಹಿತಿ ಶಿಕ್ಷಣದ ಅರಿವನ್ನು ನೀಡಬೇಕು ಎಂದು ಕರೆ ನೀಡಿದರು.



ಜೆ.ಜೆ.ಎಂ ವೈದ್ಯಕೀಯ ಕಾಲೇಜಿನ ಮುಖ್ಯಸ್ಥರು ಹಾಗೂ ಮಕ್ಕಳ ತಜ್ಞರಾದ ಡಾ|| ಮೂಗನಗೌಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ರಾಜಾನಾಯ್ಕ ಕೆ.ಎಸ್ ಮಾತಾನಾಡಿ ಬಾಲ್ಯವಿವಾಹ ತಡೆ, ಸ್ತನ್ಯಪಾನದಿಂದ ಮಗುವಿನ ಸಮತೋಲನ ಬೆಳವಣಿಗೆ, ಭೇಟಿ ಬಚಾವೋ ಭೇಟಿ ಪಡಾವೋ ಪೋಕ್ಸೊಕಾಯ್ದೆ, ಲಿಂಗ ತಾರತಮ್ಯ ತಡೆ, ಹೆಣ್ಣು ಮಕ್ಕಳ ಸುರಕ್ಷತೆಯಲ್ಲಿ ಪೋಷಕರ ಪಾತ್ರ ಬಹುಮುಖ್ಯ.ಈ ನಿಟ್ಟಿನಲ್ಲಿ ಅರಿವು ಕಾರ್ಯಕ್ರಮಗಳನ್ನು ನಡೆಸಿ ಜಾಗೃತಿ ಮೂಡಿಸಬೇಕು ಎಂದರು.

ಡಾ|| ವಿನಯ್‌ಕುಮಾರ್ ಎಸ್. ಅಪ್ಪಣ್ಣನವರ್ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ "ವಿಶ್ವ ಸ್ತನ್ಯಪಾನ ಕುರಿತು" ಸುಧೀರ್ಘವಾಗಿ ಸ್ತನ್ಯಪಾನದ ಕ್ರಮಗಳು, ತಾಯಿ ಮತ್ತು ಮಗುವಿನ ಆರೈಕೆ, ಸ್ತನ್ಯಪಾನದ ಉತ್ತಮ ಪ್ರಯೋಜನ, ಸಮಸ್ಯೆಗಳನ್ನು ಹಾಗೂ ನಿಯಂತ್ರಣಗಳನ್ನು ವಿವರಿಸಿದರು.

ಕಮ್ಯುನಿಟಿ ಮೆಡಿಷನ್ ವಿಭಾಗದ ಮುಖ್ಯಸ್ಥರಾದ ಡಾ.ಅನುರೂಪಾ, ಅಸೋಸಿಯೆಟ್ ಪ್ರೊಫೆಸರ್ ಡಾ|| ಚಂದ್ರಶೇಖರ್ ಗೌಳಿ, ತಾಲ್ಲೂಕು ವೈದ್ಯಾಧಿಕಾರಿ ಡಾ|| ದೇವರಾಜ್, ಎ.ಸಿ.ಡಿ.ಪಿ.ಓ, ಸಿ.ಡಿ.ಪಿ.ಓ ಪ್ರಿಯದರ್ಶಿನಿ, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಮೇಲ್ವಿಚಾರಕರು, ಜೆ.ಜೆ.ಎಂ ವೈದ್ಯಕೀಯ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

### ಸಿಇಒ ಎಸ್.ಜೆ.ಸೋಮಶೇಖರ್ ಕಟ್ಟುನಿಟ್ಟಿನ ಸೂಚನೆ

## ಉದ್ಯೋಗ ಖಾತರಿಯೋಜನೆಯ ನರೇಗಾ ಕಾಮಗಾರಿಗಳಿಗೆ ಯಂತ್ರಗಳ ಬಳಕೆ ಸಲ್ಲದು

» ಚಳ್ಳಕೆರೆ

ಕರ್ನಾಟಕ ರಾಜ್ಯ ಪಂಚಾಯಿತ್‌ರಾಜ್ ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆ ಗ್ರಾಮೀಣ ಪ್ರದೇಶದ ಬಡ ಜನರಿಗೆ ಮಹಾತ್ಮಗಾಂಧಿ ಉದ್ಯೋಗ ಖಾತರಿಯ ನರೇಗಾ ಯೋಜನೆಯಡಿ 130 ದಿನಗಳ ಕಾಮಗಾರಿಯನ್ನು ನೀಡಿ ಅವರ ಬದುಕನ್ನು ಹಸನುಗೊಳಿಸುವ ಕಾರ್ಯವನ್ನು ಮಾಡುತ್ತಿದೆ. ಇದರ ಜೊತೆಯಲ್ಲೇ ಅನೇಕ ಯೋಜನೆಗಳ ಮೂಲಕ ವಿವಿಧ ಕಾಮಗಾರಿ ನಡೆಸುತ್ತಾ ಗ್ರಾಮೀಣ ಭಾಗದ ಜನರ ಬದುಕಿಗೆ ಹೆಚ್ಚು ಆಸರೆಯಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್. ಜೆ.ಸೋಮಶೇಖರ್ ತಿಳಿಸಿದರು.



ಅವರು, ತಾಲ್ಲೂಕಿನ ತಳಕು ಮತ್ತು ಹಿರೇಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೈಗೊಂಡ ಉದ್ಯೋಗ ಖಾತರಿ ಯೋಜನೆಗಳ ಕಾಮಗಾರಿಗಳಾದ ಕೃಷಿಹೊಂಡ ನಿರ್ಮಾಣ, ಬದು ನಿರ್ಮಾಣ, ದಾಳಿಂಬೆ ಬೆಳೆ, ನೀರಿನಹೊಂಡ, ನೀರಿನಕಾಲುವೆ ನಿರ್ಮಾಣ ಮುಂತಾದ ಕಾಮಗಾರಿಗಳನ್ನು ವೀಕ್ಷಿಸಿದರಲ್ಲದೆ, ವಿವಿಧ ಕಾಮಗಾರಿಗಳ ಅನುಷ್ಠಾನದಲ್ಲಿ ಭಾಗವಹಿಸಿದ ಕೂಲಿಕಾರರ ಸಮಸ್ಯೆಗಳನ್ನು ಆಲಿಸಿ, ಆರೋಗ್ಯ ತಪಾಸಣಾ ಕಾರ್ಯದಲ್ಲೂ ಭಾಗವಹಿಸಿದ್ದರು.

ಸರ್ಕಾರ ವಿವಿಧ ಯೋಜನೆಗಳು ಗ್ರಾಮೀಣ ಭಾಗದಲ್ಲೇ ಹೆಚ್ಚು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳಬೇಕಿದೆ. ಗ್ರಾಮೀಣ ಭಾಗದ ಜನರು ತಾವು ಇರುವ ಸ್ಥಳದಲ್ಲೇ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿಗಳಲ್ಲಿ ಭಾಗವಹಿಸಬಹುದು. ಪ್ರತಿಯೊಬ್ಬ ಕೂಲಿಕಾರರಿಗೂ ಕಾರ್ಡ್‌ಗಳನ್ನು ಮಾಡಿಕೊಡಿ, ಕೂಲಿ ಕೇಳಿ ಬರುವ ಗ್ರಾಮಸ್ಥರಿಗೆ ಕೆಲಸ ನೀಡಿ, ಅವರಿಗೆ ಪಿಡಿಒ ಮತ್ತು ಪಂಚಾಯಿತಿ ಸಿಬ್ಬಂದಿ ಜಾಬ್ ಕಾರ್ಡ್‌ಗಳನ್ನು ಮಾಡಿಸಿಕೊಡುವ ಜವಾಬ್ದಾರಿಯನ್ನು ನಿರ್ವಹಿಸಿ, ಯಾವುದೇ ಕಾರಣಕ್ಕೂ ಯಂತ್ರಗಳನ್ನು ಬಳಸದಂತೆ ಇಒ ಶಶಿಧರಗೆ ಸೂಚಿಸಿದರು.ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ ಮಾಹಿತಿ ನೀಡಿ, ತಳಕು ಮತ್ತು ಹಿರೇಹಳ್ಳಿ ವ್ಯಾಪ್ತಿಯಲ್ಲಿ ಇಲಾಖೆಯ ವಿವಿಧ ಯೋಜನೆಯ ಕಾಮಗಾರಿ ಅನುಷ್ಠಾನದಲ್ಲಿ ಗುಣಮಟ್ಟವೂ ಸೇರಿದಂತೆ ಯಾವುದೇ ಲೋಪವಾಗದಂತೆ ಎಚ್ಚರಿಕೆ ವಹಿಸಲಾಗಿದೆ.

ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತಾಂತ್ರಿಕ ಅಧಿಕಾರಿ ಹಾಗೂ ನೋಡಲ್ ಅಧಿಕಾರಿಗಳು ಪ್ರತಿಯೊಂದು ಕಾಮಗಾರಿಯನ್ನು ಖುದ್ದಾಗಿ ವೀಕ್ಷಿಸಿ ಮಾಹಿತಿ ನೀಡಬೇಕು. ತಾಲ್ಲೂಕಿನ ಬಹುತೇಕ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಾಮಗಾರಿಗಳ ಅನುಷ್ಠಾನ ಕಾರ್ಯ ಭರದಿಂದ ಸಾಗಿದೆ ಎಂದರು. ಹಿರೇಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ರಾಜಣ್ಣ ಉಪಸ್ಥಿತರಿದ್ದರು.

### ಕ್ಷೇತ್ರದ ಅಭಿವೃದ್ಧಿಪರ ಚಿಂತನೆಗೆ ಸಿಎಂ, ಡಿಸಿಎಂ ಪೂರ್ಣಸಹಕಾರ

## ಶಾಲಾ ಕೊಠಡಿ, ಸಿಸಿ ರಸ್ತೆಗೆ ಕಾಮಗಾರಿಗೆ ಭೂಮಿ ಪೂಜೆಯಲ್ಲಿ ಎನ್.ವೈ.ಜಿ.



» ಚಳ್ಳಕೆರೆ

ಕಳೆದ ಸುಮಾರು 15 ತಿಂಗಳಿನಿಂದ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷದ ನೇತೃತ್ವದ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕ್ಷೇತ್ರದ ಅಭಿವೃದ್ದಿಗೆ ಹೆಚ್ಚಿನ ನೆರವನ್ನು ನೀಡುತ್ತಿದ್ದಾರೆ. ಕ್ಷೇತ್ರದಲ್ಲಿ ಅಭಿವೃದ್ಧಿ ಕಾಮಗಾರಿಗಳ ಪರ್ವ ಆರಂಭವಾಗಿದೆ ಎಂದು ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ ತಿಳಿಸಿದರು. ಅವರು, ಬುಧವಾರ ತಾಲ್ಲೂಕಿನ ತಳಕು ಹೋಬಳಿಯ ಕೋಡಿಹಳ್ಳಿ ಗ್ರಾಮದ ಬೋವಿ ಕಾಲೋನಿಯ ಸುಮಾರು 25 ಲಕ್ಷ ವೆಚ್ಚದ ಸಿಸಿ ರಸ್ತೆ ಕಾಮಗಾರಿ, ತಳಕು ಎಸ್‌ಜಿಟಿ ಕಾಲೇಜಿನ 73.35 ಲಕ್ಷ ವೆಚ್ಚದ ನೂತನ ಕೊಠಡಿಯ ಭೂಮಿಪೂಜೆ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದರು. ಸರ್ಕಾರ ವಿವಿಧ ಯೋಜನೆಗಳ ಮೂಲಕ ಹಲವಾರು ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸುತ್ತಿದೆ. ಜಿಲ್ಲಾ ಪಂಚಾಯಿತಿ ಇಂಜಿನಿಯರಿಂಗ್ ವಿಭಾಗ ಈ ಎರಡೂ ಕಾಮಗಾರಿಗಳನ್ನು ಸಕಾಲದಲ್ಲಿ ಪೂರ್ೈಸಲಿದೆ. ಸಾರ್ವಜನಿಕರು ಸರ್ಕಾರದ ಸೌಲಭ್ಯಗಳ ಸದ್ವಿನಿಯೋಗಕ್ಕೆ ಮುಂದಾಗಬೇಕು ಎಂದರು. ಸಹಾಯಕ ಕಾರ್ಯಪಾಲಕೆ ಅಭಿಯಂತರೆ ಎನ್.ಕಾವ್ಯ ಮಾತನಾಡಿ, 2023-24ನೇ ಸಾಲಿನ ಎಸಿಪಿ, ಟಿಎಸ್‌ಪಿ ಯೋಜನೆಯಡಿ ಬೋವಿ ಕಾಲೋನಿಯಲ್ಲಿ ಸಿಸಿ ರಸ್ತೆ ನಿರ್ಮಾಣ ಕಾಮಗಾರಿ, ಸದರಿ ಸಾಲಿನ ರಾಜ್ಯವಲಯ ಕಾರ್ಯಕ್ರಮ ವಿವೇಕ ಯೋಜನೆಯಡಿ ತಳಕು ಎಸ್‌ಜಿಟಿ ಕಾಲೇಜಿನ 73.33 ಲಕ್ಷ ವೆಚ್ಚದ ಕೊಠಡಿ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಾಗಿದೆ. ಈಗಾಗಲೇ ಶಾಸಕರು ಗುಣಾತ್ಮಕ ಕಾಮಗಾರಿಯ ಬಗ್ಗೆ ಮಾಹಿತಿ ನೀಡಿದ್ದಾರೆ. ಇಲಾಖೆ ವತಿಯಿಂದ ಸದರಿ ಎರಡೂ ಕಾಮಗಾರಿಗಳನ್ನು ನಿಯಮಬದ್ದವಾಗಿ ಸಕಾಲದಲ್ಲಿ ಪೂರೈಸಲಾಗುವುದು ಎಂದರು. ಬಿಇಒ ಕೆ.ಎಸ್.ಸುರೇಶ್, ಎಸ್‌ಜಿಟಿ ಕಾಲೇಜು ಪ್ರಾಂಶುಪಾಲ ಜಿ.ದೇವರಾಜ್, ತಳಕು, ನಾಯಕನಹಟ್ಟಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗೇಶ್‌ರೆಡ್ಡಿ, ಕೋಡಿಹಳ್ಳಿ ಜಿ.ಎಸ್.ತಿಪ್ಪೇಸ್ವಾಮಿ, ಗೌರಸಮುದ್ರ ಗ್ರಾಮ ಪಂಚಾಯಿತಿ ಅಧ್ಯಕ್ಷ ಓಬಣ್ಣ, ತಳಕು ಪಂಚಾಯಿತಿ ಅಧ್ಯಕ್ಷೆ ದ್ರಾಕ್ಷಾಯಿಣಿ, ಉಪಾಧ್ಯಕ್ಷೆ ಉಮಾ, ಸದಸ್ಯರಾದ ರವಿಚಂದ್ರ, ಓಬಮ್ಮ, ಕ್ಯಾಸಪ್ಪ, ನೀಲಮ್ಮ, ಕೆಡಿಪಿ ಸದಸ್ಯ ಕೆ.ಸಿ.ನಾಗರಾಜು, ಮುಂತಾದವರು ಉಪಸ್ಥಿತರಿದ್ದರು.

## ಶಾಂತಕುಮಾರಿಗೆ ಜ್ಞಾನಯೋಗಿ ಶಿವಶರಣೆ ಅಕ್ಕಮಹಾದೇವಿ ಪ್ರಶಸ್ತಿ

» ಚಳ್ಳಕೆರೆ



ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿಯವರಿಗೆ ಬೆಂಗಳೂರಿನ ವಿಶ್ವ ಕನ್ನಡ ಕಲಾ ಮತ್ತು ಸಾಂಸ್ಕೃತಿಕ ಸಂಸ್ಥೆ ಜ್ಞಾನಯೋಗಿ ಶಿವಶರಣೆ ಅಕ್ಕಮಹಾದೇವಿ ಪ್ರಶಸ್ತಿಯನ್ನು ಪ್ರಕಟಿಸಿದೆ. ಈ ಬಗ್ಗೆ ಸಂಸ್ಥೆಯ ಅಧ್ಯಕ್ಷರಾದ ಈ.ರವೀಶ್ ಮಾಹಿತಿ ನೀಡಿ, ಪ್ರತಿವರ್ಷವೂ ವಿಶ್ವಕನ್ನಡ ಕಲಾಸಂಸ್ಥೆ ಸಮಾಜದ ವಿವಿಧ ವರ್ಗಗಳಲ್ಲಿ ವಿಶೇಷ ಸೇವೆಯನ್ನು ಸಲ್ಲಿಸಿದವರನ್ನು ಗುರುತಿಸಿ ಜ್ಞಾನಯೋಗಿ ಶಿವಶರಣೆ ಅಕ್ಕಮಹಾದೇವಿ ಪ್ರಶಸ್ತಿಯನ್ನು ನೀಡಲಾಗುತ್ತದೆ. ಪ್ರಸ್ತುತ ವರ್ಷ ಇಲ್ಲಿನ ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ ಈ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಕಳೆದ ಹಲವು ವರ್ಷಗಳಿಂದ ಅವರು ಎನ್‌ಎಸ್‌ಎಸ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಿ ರಾಜ್ಯಮಟ್ಟದಲ್ಲಿ ಪ್ರಶಸ್ತಿ ಪಡೆದಿರುವುದನ್ನು ಪರಿಗಣಿಸಿ ಪ್ರಶಸ್ತಿ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಪ್ರಶಸ್ತಿ ಪ್ರಧಾನ ಸಮಾರಂಭ ವಿಜಯನಗರ ಜಿಲ್ಲೆಯ ಕೂಡ್ಲಗಿ ತಾಲ್ಲೂಕಿನ ಹುಲಿಕೆರೆ ಗ್ರಾಮದ ಆನಂದ ನರ್ಸರಿ ಗಾರ್ಡ್‌ನಲ್ಲಿ ನಡೆಯುವ 5ನೇ ರಾಜ್ಯಮಟ್ಟದ ವಿಶ್ವಕನ್ನಡ ಸಾಹಿತ್ಯ ಮತ್ತು ಪರಿಸರ ಜಾಗೃತಿ ಸಮ್ಮೇಳನದಲ್ಲಿ ಪ್ರಶಸ್ತಿ ನೀಡಲಾಗುವುದು ಎಂದಿದ್ದಾರೆ.

## ಪ್ರಮುಖ ಸುದ್ದಿ

# ಸ್ವಚ್ಛತೆ ಕಾಪಾಡಿ, ರೋಗ ಓಡಿಸಿ: ಟಿಹೆಚ್‌ಇಒ ಮಂಜುನಾಥ್

» ಚಿತ್ರದುರ್ಗ

ಸ್ವಚ್ಛತೆ ಕಾಪಾಡುವ ಮೂಲಕ ರೋಗಗಳನ್ನು ಓಡಿಸಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್. ಎಸ್.ಮಂಜುನಾಥ್ ಸಲಹೆ ನೀಡಿದರು.

ಚಿತ್ರದುರ್ಗ ನಗರದ ಜೆ.ಜೆ.ಹಟ್ಟಿ ಅಂಗನವಾಡಿ ಕೇಂದ್ರದಲ್ಲಿ ಬುಧವಾರ ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ನಗರಸಭೆ ಸಹಯೋಗದೊಂದಿಗೆ ಡಯೇರಿಯಾ ತಡೆಗಟ್ಟುವ ಅಭಿಯಾನ, ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು.

ರೋಗ ಬಂದ ನಂತರ ಚಿಕಿತ್ಸೆ ಪಡೆಯುವುದಕ್ಕಿಂತ ರೋಗವೇ ಬಾರದಹಾಗೆ ಜೀವನ ರೂಪಿಸಿಕೊಳ್ಳವುದು ಉತ್ತಮ. ಡಯೇರಿಯಾ ಕಲುಷಿತ ನೀರು, ಆಹಾರ ಸೇವನೆಯಿಂದ ಬರುವ ಸಾಂಕ್ರಾಮಿಕ ರೋಗ. ಶುದ್ಧ ನೀರು ಅಹಾರ, ವೈಯಕ್ತಿಕ ಸ್ವಚ್ಛತೆ ಸರಿಯಾದ ಕ್ರಮದಲ್ಲಿ ಕೈಗಳನ್ನು ಸ್ವಚ್ಛವಾಗಿ ತೊಳೆಯುವುದು, ಆರೋಗ್ಯಕರ ಅಭ್ಯಾಸಗಳು ರೂಡಿಸಿಕೊಳ್ಳಿ ಎಂದು ಹೇಳಿದರು.



ಮಗುವಿಗೆ ಬೇಧಿಯಾಗಿದೆ ಎಂದು ಎದೆಹಾಲುಣಿಸುವುದನ್ನು ನಿಲ್ಲಿಸಬೇಡಿ. ಎದೆಹಾಲು ಯಥೇಶ್ಚವಾಗಿ ನೀಡಿ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಆರು ತಿಂಗಳ ಕಾಲ ಎದೆಹಾಲನ್ನು ಬಿಟ್ಟು ಮಗುವಿಗೆ ಬೇರೆ ಏನನ್ನು ನೀಡಬೇಡಿ ಕಡೇ ಪಕ್ಷ ಎರಡು ವರ್ಷಗಳ ತನಕ ಮಗುವಿಗೆ ಎದೆಹಾಲು ನೀಡುವುದರಿಂದ ತಾಯಿ ಮತ್ತು ಮಗುವಿನ ಆರೋಗ್ಯ ಸುಧಾರಿಸುತ್ತದೆ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ ಅವರು ಮಕ್ಕಳ ಲಸಿಕಾ ಪಟ್ಟಿ ಯಾವ ಸಮಯದಲ್ಲಿ ಯಾವ ಲಸಿಕೆ ಮಕ್ಕಳಿಗೆ ಕೊಡಿಸಬೇಕ. ಪೌಷ್ಟಿಕ ಪೂರಕ ಆಹಾರದ ಬಗ್ಗೆ ಮಾಹಿತಿ ನೀಡಿದರು.

ನಗರಸಭೆ ಆರೋಗ್ಯ ನಿರೀಕ್ಷಣಾಧಿಕಾರಿ ನಾಗರಾಜ್ ಮಾತನಾಡಿ, ಘನತ್ಯಾಜ್ಯ ವಸ್ತುಗಳು, ಹಸಿ ಕಸ, ಒಣ ಕಸ ವಿಲೇವಾರಿ ಬಗ್ಗೆ ತಿಳಿಸಿದ ಅವರು, ಡೆಂಗ್ಯೂ ನಿಯಂತ್ರಣಕ್ಕೆ ಸ್ವಚ್ಛತೆ ಪರಿಸರ ನೈರ್ಮಲ್ಯ ಕಾಪಾಡಿ ಎಂದರು.

ನಗರಸಭೆ ಪರಿಸರ ಇಂಜಿನಿಯರ್ ಜಾಫರ್ ಮಾತನಾಡಿ, ಕೈ ತೊಳೆಯುವ ವಿಧಾನದ ಬಗ್ಗೆ ಮತ್ತು ಡೆಂಗ್ಯೂ ನಿಯಂತ್ರಣಕ್ಕೆಒಳಾಂಗಣಧೂಮಲೀಕರಣ ಮಾಡಲು ಸಹಕರಿಸಿ ಎಂದರು.

ಇದೇ ಸಂದರ್ಭದಲ್ಲಿ ತಾಯಿ ಮಕ್ಕಳಿಗೆ ಓ.ಆರ್.ಎಸ್. ಪಟ್ಟಣ ಜಿಂಕ್ ಮಾತ್ರೆ ನೀಡಲಾಯಿತು. ಕಾರ್ಯಕ್ರಮದಲ್ಲಿ ಪ್ರಾಥಮಿಕ ಸುರಕ್ಷತಾಧಿಕಾರಿ ವಿನ್ಸಿ, ಅಂಗನವಾಡಿ ಕಾರ್ಯಕರ್ತೆಯರಾದ ಪ್ರೇಮಾ, ಭಾರತಿ, ಆಶಾ ಕಾರ್ಯಕರ್ತೆಯರಾದ ಮಿಸ್ಬಾ ಫಾತಿಮಾ, ರತ್ನಮ್ಮ, ಪುಷ್ಪಲತಾ, ತಾಯಿ ಮಕ್ಕಳು, ಪೋಷಕರು ಇದ್ದರು.



# ಕಲ್ಲ ನಾಗರ ಕಂಡರೆ ಹಾಲೆರೆಯಂಬರಯ್ಯ ದಿಟದ ನಾಗರ ಕಂಡರೆ ಕೊಲ್ಲೆಂಬರಯ್ಯ

ಹಾಲನ್ನು ಹಾವಿನ ಬಾಯಿಗೆ ಹಾಕುವುದಿಲ್ಲ. ಅದನ್ನು ಮಣ್ಣಿನ ಹುತ್ತಕ್ಕೆ ಎರೆಯಲಾಗುತ್ತದೆ. ಅಂದರೆ ಪೌಷ್ಟಿಕ ಆಹಾರ ಮಣ್ಣುಪಾಲಾಗುತ್ತದೆ.

ಅದೇ ಹಾಲನ್ನು ಅವಶ್ಯಕತೆ ಇರುವವರಿಗೆ ಆಹಾರವಾಗಿ ನೀಡಬಹುದಲ್ಲವೇ ? ದೈವ ಭಕ್ತಿಗೂ, ಧರ್ಮ ಭಕ್ತಿಗೂ, ಪರಿಸರ ಭಕ್ತಿಗೂ, ಮಾನವೀಯತೆಗೂ ಇದರಿಂದ ಒಂದು ಅರ್ಥ ಬರುತ್ತದೆಯಲ್ಲವೇ.....

## ಯೋಚಿಸುವ ಸರದಿ ನಮ್ಮದು......

ಒಂದು ಸಾಂಸ್ಕೃತಿಕ ಹಬ್ಬವಾಗಿ ನಾಗರ ಪಂಚಮಿಗೆ ಯಾವುದೇ ವಿರೋಧವಿಲ್ಲ. ಹಬ್ಬಗಳು ನಮ್ಮ ಸಂಸ್ಕೃತಿಯ ಮತ್ತು ಬದುಕಿನ ಭಾಗಗಳು. ಅದನ್ನು ಆಚರಿಸುವುದು ಸಂಭ್ರಮಿಸುವುದು ಉತ್ತಮ ನಡವಳಿಕೆ. ಆದರೆ ಹಬ್ಬದ ಹೆಸರಿನಲ್ಲಿ ಮೌಢ್ಯ ಮತ್ತು ಆಹಾರ ವಸ್ತುಗಳ ವ್ಯರ್ಥವಾಗುವುದನ್ನು ತಡೆಯಬೇಕು ಮತ್ತು ಪರಿವರ್ತನೆ ಹೊಂದಬೇಕು. ಬದಲಾವಣೆ ಜಗದ ನಿಯಮ. ಅದೇ ಅರಿವು ಅದೇ ಶಿಕ್ಷಣ ಅದೇ ನಾಗರಿಕತೆ........

ಭಾರತದಲ್ಲಿ ಸುಮಾರು 80 ಲಕ್ಷ ಜನ ಅಪೌಷ್ಟಿಕತೆಯಿಂದ ನರಳುತ್ತಿದ್ದಾರೆ ಎಂಬ ವರದಿಯಿದೆ. ಅಂತಹವರಿಗೆ ಹಾಲು ಎಷ್ಟು ಮುಖ್ಯ ಎಂಬುದನ್ನು ಒಮ್ಮೆ ಯೋಚಿಸಿ.

ಹೊಸ ಬಟ್ಟೆ, ಆರೋಗ್ಯಯುತ ಒಳ್ಳೆಯ ಊಟ, ಕುಟುಂಬವರು ಮತ್ತು ಗೆಳೆಯರೊಂದಿಗೆ ಮಾತುಕತೆ, ವ್ಯಕ್ತಿಗತವಾಗಿ ಮತ್ತು ಸಾಮಾಜಿಕವಾಗಿ ಒಂದಷ್ಟು ಒಳ್ಳೆಯ ಚಿಂತನೆ, ಸ್ವಲ್ಪ ವಿಶ್ರಾಂತಿ, ಮಕ್ಕಳಿಗೆ ಹಬ್ಬಗಳ ಹಿನ್ನಲೆ ಮತ್ತು ಪರಿಚಯ ಎಲ್ಲವೂ ಸಹನೀಯ ಮತ್ತು ಅನುಕರಣೀಯ.

ಆದರೆ ಅತ್ಯುಪಯುಕ್ತ ಆಹಾರ ಪದಾರ್ಥಗಳ ದುರುಪಯೋಗ ಅಕ್ಷಮ್ಯ. ಒಬ್ಬರನ್ನು ನೋಡಿ ಇನ್ನೊಬ್ಬರು, ಮಾಧ್ಯಮಗಳ ಮೂರ್ಖತನ ಮತ್ತು ಬೇಜವಾಬ್ದಾರಿ ಕಾರ್ಯಕ್ರಮಗಳಿಂದ ಮತ್ತೊಬ್ಬರು,



**ಹಾವು ಹಾಲು ಕುಡಿಯುವುದಿಲ್ಲ ಎಂದು ಪ್ರಾಣಿ ಶಾಸ್ತ್ರಜ್ಞರು ಹೇಳುತ್ತಾರೆ...**

ಯಾರೋ ಜ್ಯೋತಿಷಿಗಳಿಂದ ಮಗದೊಬ್ಬರು ಹೀಗೆ ಇದು ನಡೆಯುತ್ತಲೇ ಇರುತ್ತದೆ. ಪ್ರಜ್ಞಾವಂತ ನಾಗರಿಕರು ಇದಕ್ಕೆ ಒಂದು ಮಿತಿ ಹೇರಲೇಬೇಕಿದೆ.

ಸಿನಿಮಾ ನಟರ ಕಟೌಟುಗಳಿಗೆ ಹಾಲಿನ ಅಭಿಷೇಕ, ಇನ್ಯಾರಿಗೋ ಸೇಬಿನ ಹಾರ, ಸಿನಿಮಾ – ಧಾರವಾಹಿಗಳಲ್ಲಿ ಆಹಾರ ಪದಾರ್ಥಗಳನ್ನು ಚೆಲ್ಲುವ ಅಥವಾ ನಾಶಪಡಿಸುವ ದೃಶ್ಯಗಳು ಎಲ್ಲವನ್ನೂ ನಿಲ್ಲಿಸಬೇಕು. ಅದು ರಾಷ್ಟ್ರೀಯ ಸಂಪನ್ಮೂಲಗಳ ನೇರ ದುರುಪಯೋಗ ಎಂದು ಪರಿಗಣಿಸಬೇಕು.

ಹಾಲೇ ಇರಲಿ, ಹಣ್ಣು ತರಕಾರಿಗಳೇ ಇರಲಿ, ಬೇಳೆ ಕಾಳುಗಳೇ ಇರಲಿ ರೈತರು ಬಹಳ ಕಷ್ಟಪಟ್ಟು ಪ್ರಕೃತಿಯನ್ನು ಉಪಯೋಗಿಸಿಕೊಂಡು ಬೆಳೆಯುತ್ತಾರೆ. ಅದಕ್ಕೆ ಗೌರವ ಕೊಡಬೇಕಾದದ್ದು ಮತ್ತು ಸದುಪಯೋಗ ಪಡಿಸಿಕೊಳ್ಳಬೇಕಾದದ್ದು ನಮ್ಮ ಕರ್ತವ್ಯ. ನಾಗರ ಪಂಚಮಿ ಒಂದು ಹಬ್ಬವಾಗಿ ಆಚರಿಸಿ. ಆದರೆ ಹಾವು ಅಥವಾ ಹುತ್ತಕ್ಕೆ ಹಾಲೆರೆಯದೇ ಅದೇ ಹಾಲು ಹಣ್ಣುಗಳನ್ನು ದಯವಿಟ್ಟು ಆಹಾರವಾಗಿ ಉಪಯೋಗಿಸಿಕೊಳ್ಳಿ ಅಥವಾ ಇತರರಿಗೆ ದಾನ ಮಾಡಿ. ಇದರಿಂದ ನಾಗರ ಪಂಚಮಿ ಒಂದು ಹಸಿವು ನಿವಾರಣೆಯ ಹಬ್ಬವಾಗಲಿ. .....

ಇದನ್ನು ಧಾರ್ಮಿಕ ನಾಯಕರುಗಳು, ಮಾಧ್ಯಮಗಳವರು, ಶಿಕ್ಷಕರು, ವಿಜ್ಞಾನಿಗಳು, ರಾಜಕಾರಣಿಗಳು, ಪ್ರಗತಿಪರರು ಎಲ್ಲರೂ ಹೇಳಬೇಕು. ಒಂದು ಸಮಾಜದ ನಿಜವಾದ ಆತ್ಮ ಅಡಗಿರುವುದು ಧರ್ಮದಿಂದಲ್ಲ, ವಿಜ್ಞಾನದಿಂದಲ್ಲ ಪ್ರಕೃತಿಯ ಸಹಜ ನಿಯಮದಿಂದ ಮಾತ್ರ. ಅದಕ್ಕಾಗಿ ನಮ್ಮ ನಿಷ್ಠೆ ಪ್ರಕೃತಿಯೆಡೆಗೆ ಇರಲಿ........



■ ಲೇಖನ
ವಿವೇಕಾನಂದ.
ಹೆಚ್.ಕೆ.
9844013068

# ಯೋಗ ಶಿಕ್ಷಣ ಸಂಸ್ಥೆಯಿಂದ ಉಚಿತ ಪ್ರಕೃತಿ ಚಿಕಿತ್ಸೆ

» ಚಿತ್ರದುರ್ಗ

ಪ್ರಕೃತಿ ತಾಯಿಯನ್ನು ಆರಾಧಿಸುವ ಮೂಲಕ ಪ್ರಕೃತಿಯೊಂದಿಗೆ ಸಂಪರ್ಕ ಸಾಧಿಸಿ ಪ್ರಕೃತಿಯ ಶಕ್ತಿಯಿಂದ ಎಂತಹ ರೋಗವನ್ನಾದರೂ ಗುಣಪಡಿಸಬಹುದಾಗಿದೆ ' ಎಂದು ಪ್ರಕೃತಿ ಚಿಕಿತ್ಸಕರಾದ ಶ್ರೀನಿವಾಸ್ ಜಿ ಅಭಿಪ್ರಾಯ ಪಟ್ಟಿದ್ದಾರೆ.

ಭಾನುವಾರ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಚಿತ್ರದುರ್ಗ ಹಾಗೂ ಬೆಂಗಳೂರಿನ ಶ್ರೀ ಪ್ರಕೃತಿ ಧರ್ಮ ಪೀಠ ಟ್ರಸ್ಟ್ ಬೆಂಗಳೂರು ವತಿಯಿಂದ ಸಾರ್ವಜನಿಕರಿಗಾಗಿ ಏರ್ಪಡಿಸಿದ್ದ ಪ್ರಕೃತಿ ಚಿಕಿತ್ಸಾ ವಿಧಾನದ ಮೂಲಕ ಖಾಯಿಲೆಗಳನ್ನು ಗುಣ ಪಡಿಸಬಹುದಾದ ಪ್ರಕೃತಿ ಹೀಲಿಂಗ್ ಉಚಿತ ತರಬೇತಿ ಕಾರ್ಯಕ್ರಮದಲ್ಲಿ ಪ್ರಾತ್ಯಕ್ಷಿಕೆಯ ಮೂಲಕ ತರಬೇತಿ ನೀಡಿ ಅವರು ಮಾತನಾಡಿದರು.

ಇದೇ ಸಂಧರ್ಭದಲ್ಲಿ ಕಾರ್ಯಕ್ರಮದ ಆಯೋಜಕ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಅಧ್ಯಕ್ಷ ರವಿ ಅಂಬೇಕರ್ ಮಾತನಾಡಿ



ಕಾರ್ಯಕ್ರಮ ಆಯೋಜಕ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಅಧ್ಯಕ್ಷ ರವಿ ಕೆ.ಅಂಬೇಕರ್ ಮಾತನಾಡಿ ಪ್ರಕೃತಿಮಾತೆಯಿಂದ ನಾವು ಏನನ್ನಾದರು ಪಡೆಯುವ ಮೊದಲು ನಾವು ಪ್ರಕೃತಿ ಮಾತೆಯ ಒಡಲಲ್ಲಿ ವರ್ಷದಲ್ಲಿ ಒಂದಾದರೂ ಮರ_ಗಿಡನೆಡುವ ಮೂಲಕ ಕೃತಜ್ಞತೆ ಸಲ್ಲಿಸಬೇಕು ಪ್ರತಿಯೊಬ್ಬರೂ ತಮ್ಮ ಮನೆಯ ಸದಸ್ಯರ ಜನ್ಮದಿನದಂದು ಸಸಿಗಳನ್ನು ನೆಟ್ಟರೆ ಪರಿಸರ ರಕ್ಷಣೆ ತಾನಾಗೇ ಬೆಳೆಯುತ್ತದೆ ಎಂದು ಹೇಳಿದರುತರಬೇತಿಯಲ್ಲಿ ಅಖಂಡ ಭಾರತ ಧಾರ್ಮಿಕ ಸೆಲ್ ಕನ್ವೀನರ್ ಪಿ. ವಿ. ರವಿಶಂಕರ್ ವರ್ಮ ತರಬೇತಿಯಲ್ಲಿ ಸಹಕಾರ ನೀಡಿದರು.

ನಗರದ ಕೋಟೆ ಮುಂಭಾಗದ ಶ್ರೀ ರಾಘವೇಂದ್ರ ಶಿಕ್ಷಣ ಸಂಸ್ಥೆ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಪತ್ರಿಕಾ ವರಗಾರ ಪ್ರಾಣೇಶ್ ಆಚಾರ್ಯ, ಭಾರತೀಯ ಯೋಗ ಶಿಕ್ಷಣ ಸಂಸ್ಥೆಯ ಗೌರವಾಧ್ಯಕ್ಷ ಆರ್ ಸತ್ಯಣ್ಣ, ಸಂಸ್ಥೆ ಅಧಕ್ಷ ರವಿ ಕೆ.ಅಂಬೇಕರ್ ಪರಿಸರವಾದಿ ಮಲ್ಲಿಕಾರ್ಜುನಪ್ಪ, ಯೋಗ ಗುರು ಚಿನ್ಮಯಾನಂದ,ವೆಂಕಟೇಶ, ಆರೋಗ್ಯ ನಿರೀಕ್ಷಣಾಧಿಕಾರಿ ಮಹೇಶ್ ಡಿ. ಯೋಗ ಶಿಕ್ಷಕರಾದ ಶ್ರೀಮತಿ ವಸಂತಲಕ್ಷ್ಮಿ, ಮಂಜುಳಾ ಹಾಗೂ ಕಾಲೇಜು ವಿಧ್ಯಾರ್ಥಿಗಳ ಭಾಗವಹಿಸಿದ್ದರು.

# ಪ್ರಶ್ನೆ ಪತ್ರಿಕೆ ಗೊಂದಲ: ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಎಬಿವಿಪಿ ಒತ್ತಾಯ

» ಚಿತ್ರದುರ್ಗ

ಬಿ.ಕಾಂ ಪರೀಕ್ಷೆಯಲ್ಲಿ ಸ್ಕೀಮ್ ಆಫ್ ವ್ಯಾಲ್ಯುವೇಷನ್ ಪತ್ರಿಕೆ ವಿತರಣೆ ನಡೆದಿರುವ ನಿರ್ಲಕ್ಷಕ್ಕೆ ಕಾರಣರಾದವರ ಮೇಲೆ ಕಾನೂನು ರೀತಿಯ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಎಬಿವಿಪಿ ಜಿಲ್ಲಾಡಳಿತ ಮೂಲಕ ದಾವಣಗೆರೆ ವಿವಿಯ ರಾಜ್ಯ ಪರೀಕ್ಷಾಂಗ ಅಧಿಕಾರಿಗಳನ್ನು ಒತ್ತಾಯಿಸಿದೆ.

ಅಂತಿಮ ವರ್ಷದ ವಾಣಿಜ್ಯ ವಿಭಾಗದ ಕಾಮರ್ಸ್ ಪತ್ರಿಕೆಗೆ ಮಂಗಳವಾರ ದಾವಣಗೆರೆ ವಿಶ್ವವಿದ್ಯಾಲಯದ ನಡೆಯಬೇಕಿದ್ದ ಆರನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆಗಳ ಬದಲಿಗೆ ಸ್ಕೀಮ್ ಆಫ್ ವ್ಯಾಲ್ಯುವೇಷನ್ ಪತ್ರಿಕೆ ನೀಡಿದ್ದರಿಂದ ವಿದ್ಯಾರ್ಥಿಗಳು



ಗೊಂದಲಕ್ಕೀಡಾಗಿದ್ದಾರೆ. ಆದ ಕಾರಣ ಬೋರ್ಡ್ ಆಫ್ ಎಕ್ಸಾಮಿನೇಷನ್ ಅಧಿಕಾರಿ ಮತ್ತು ಸಿಬ್ಬಂದಿಗಳು ನಿರ್ಲಕ್ಷ್ಯೆಯಿಂದ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗಿದೆ ಹಾಗಾಗಿ ತಾವುಗಳು ಈ ನಿರ್ಲಕ್ಷತೆಗೆ ಕಾರಣದ ಅಧಿಕಾರಿಗಳ ಮೇಲೆ ಕಾನೂನು ರೀತಿಯ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದೆ.

ಈ ಸಂದರ್ಭದಲ್ಲಿ ನಗರ ಕಾರ್ಯದರ್ಶಿ ಗೋಪಿ, ಸಾಮಾಜಿಕ ಜಾಲತಾಣ ಚಿತ್ರಸ್ವಾಮಿ, ಕಾರ್ಯಕರ್ತರಾದ ಸಂಜಯ್, ಸುದೀಪ್, ರೇವಂತ, ಆಕಾಶ್, ಚಂದ್ರಶೇಖರ್, ತಿಪ್ಪೇಶ್,ರಂಗನಾಥ್, ಮತ್ತು ಇತರರು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T